ಸಂಪುಟ : 8 ಸಂಚಿಕೆ : 157 ಪುಟ : 4 ಬೆಲೆ : 3.00 ಮಂಗಳವಾರ ಜುಲೈ 25, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 157 Pages : 4 Price : 3.00 Tuesday July 25, 2023 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದು ಮುಖ್ಯಮಂತ್ರಿಗಳ ಹಾವೇರಿ ಜಿಲ್ಲಾ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಧಾರವಾಡ


ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಜುಲೈ 25 ರಂದು ಧಾರವಾಡ ಹಾಗೂ ಹಾವೇರಿ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ.

ಬೆಳಿಗ್ಗೆ 10.30 ಕ್ಕೆ ಬೆಂಗಳೂರಿನ ಹೆಚ್ ಎಎಲ್ ವಿಮಾನ ನಿಲ್ದಾಣದಿಂದ ವಿಶೇಷ ವಿಮಾನದ ಮೂಲಕ ಹೊರಟು ಬೆಳಿಗ್ಗೆ 11.30 ಕ್ಕೆ ಹುಬ್ಬಳ್ಳಿ ವಿಮಾನ ನಿಲ್ದಾಣ ತಲುಪುವರು. ನಂತರ 11.45 ಕ್ಕೆ ಹುಬ್ಬಳ್ಳಿ ವಿಮಾನ ನಿಲ್ದಾಣದಿಂದ ರಸ್ತೆ ಮೂಲಕ ಹೊರಟು ಹಾವೇರಿಗೆ ಪ್ರಯಾಣ ಬೆಳೆಸುವರು. ಮಧ್ಯಾಹ್ನ 12.30 ಕ್ಕೆ ಹಾವೇರಿಯಲ್ಲಿ ನಡೆಯುವ ಜಿಲ್ಲಾ ಪ್ರಗತಿ ಪರಿಶೀಲನಾ ಸಭೆಯಲ್ಲಿ ಭಾಗವಹಿಸುವರು. ಸಂಜೆ 5.30 ಕ್ಕೆ ಹಾವೇರಿಯಿಂದ ರಸ್ತೆ ಮೂಲಕ ಹೊರಟು ಹುಬ್ಬಳ್ಳಿಗೆ ತಲುಪುವರು. ಬಳಿಕ ರಾತ್ರಿ 7 ಗಂಟೆಗೆ ವಿಶೇಷ ವಿಮಾನದ ಮೂಲಕ ಬೆಂಗಳೂರಿಗೆ ತೆರಳುವರು ಎಂದು ಪ್ರಕಟಣೆ ತಿಳಿಸಿದೆ.

## ಕಾನೂನು, ಪ್ರವಾಸೋದ್ಯಮ ಖಾತೆ ಸಚಿವ ಎಚ್.ಕೆ.ಪಾಟೀಲ ಅವರ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರ ಜುಲೈ 25 ಹಾಗೂ 26ರ ಪ್ರವಾಸ ವಿವರ ಇಂತಿದೆ.



ಜುಲೈ 25ರಂದು ಬೆಳಗ್ಗೆ 10.30 ಗಂಟೆಗೆ ಬೆಂಗಳೂರಿನ ಎಚ್.ಎ.ಎಲ್ ವಿಮಾನ ನಿಲ್ದಾಣದಿಂದ ವಿಶೇಷ ವಿಮಾನದ ಮೂಲಕ ಹುಬ್ಬಳ್ಳಿಗೆ ಆಗಮಿಸುವರು. ನಂತರ ರಸ್ತೆಯ ಮಾರ್ಗವಾಗಿ ಮಧ್ಯಾಹ್ನ 12.30 ಗಂಟೆಗೆ ಹಾವೇರಿಗೆ ತೆರಳಿ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರೊಂದಿಗೆ ಹಾವೇರಿ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪಾಲ್ಗೊಳ್ಳುವರು. ನಂತರ ಸಾಯಂಕಾಲ 7.15ಕ್ಕೆ ರಸ್ತೆಯ ಮಾರ್ಗವಾಗಿ ಗದಗೆ ಆಗಮಿಸಿ ವಾಸ್ತವ್ಯ ಮಾಡುವರು.

ಜುಲೈ 26 ರಂದು ಬೆಳಗ್ಗೆ 10 ಗಂಟೆಗೆ ಗದುಗಿನ ಮುನ್ಸಿಪಲ್ ಕಾಲೇಜು ಮೈದಾನದಲ್ಲಿ ಚೀನಾ-ಇಂಡೋ ಪಾಕ್ ಹಾಗೂ ಕಾರ್ಗಿಲ ಯುದ್ಧದಲ್ಲಿ ಮಡಿದ ವೀರಯೋಧರಿಗೆ ಗೌರವ ನಮನ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ನಂತರ ಮಧ್ಯಾಹ್ನ 12 ಗಂಟೆಯಿಂದ 1.30 ರ ವರೆಗೆ ಕಾಟನ್ ಸೇಲ್ ಸೋಸೈಯಟಿ ಆವರಣದಲ್ಲಿನ ಸಚಿವರ ಕಾರ್ಯಾಲಯದಲ್ಲಿ ಸಾರ್ವಜನಿಕರ ಭೇಟಿ ನಡೆಸುವರು. ಸಂಜೆ 4.30 ರಿಂದ 6.30ರ ವರೆಗೆ ಪ್ರಜಾ ಪ್ರತಿನಿಧಿಗಳಿಗೆ ಏರ್ಪಡಿಸಿದ ತರಬೇತಿಯಲ್ಲಿ ಪಾಲ್ಗೊಂಡು ರಾತ್ರಿ ಹುಬ್ಬಳ್ಳಿಗೆ ತೆರಳಿ ಅಲ್ಲಿಂದ ವಿಮಾನದ ಮೂಲಕ ಬೆಂಗಳೂರಿಗೆ ಪ್ರಯಾಣ ಬೆಳೆಸುವರು ಎಂದು ಸಚಿವರ ಕಾರ್ಯಾಲಯದ ಮೂಲಗಳು ತಿಳಿಸಿವೆ.

## ನಾಳೆ ಕಾರ್ಗಿಲ್ ಯುದ್ಧದಲ್ಲಿ ಹುತಾತ್ಮರಾದವರಿಗೆ ಶ್ರದ್ಧಾಂಜಲಿ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಜುಲೈ 26ರಂದು ಬೆಳಿಗ್ಗೆ 8 ಗಂಟೆಗೆ ಧಾರವಾಡದ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಹತ್ತಿರವಿರುವ ಕಾರ್ಗಿಲ್ ಸ್ತೂಪದಲ್ಲಿ ಕಾರ್ಗಿಲ್ ಯುದ್ಧದಲ್ಲಿ ಹುತಾತ್ಮರಾದ ಯೋಧರಿಗೆ ಶ್ರದ್ಧಾಂಜಲಿ ಕಾರ್ಯಕ್ರಮವನ್ನು ಜಿಲ್ಲಾಡಳಿತ ಹಾಗೂ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯಿಂದ ಹಮ್ಮಿಕೊಳ್ಳಲಾಗಿದೆ. ಎಲ್ಲ ಮಾಜಿ ಸೈನಿಕರು, ಮಾಜಿ ಸೈನಿಕರ ಅವಲಂಬಿತರು ಹಾಗೂ ಸಾರ್ವಜನಿಕರು ಸದರಿ ಕಾರ್ಯಕ್ರಮಕ್ಕೆ ಹಾಜರಾಗಬಹುದಾಗಿದೆ.

## ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

2023-24ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯಿಂದ ಜಿಲ್ಲೆಯ ಪರಿಶಿಷ್ಟ ಜಾತಿಯ ಕಾನೂನು ಪದವೀಧರರಿಗೆ ವೃತ್ತಿ ತರಬೇತಿ ಅವಧಿಯಲ್ಲಿ ಶಿಷ್ಯವೇತನ ಪಾವತಿಸುವ ಕಾರ್ಯಕ್ರಮದಡಿ ಅರ್ಹ ಕಾನೂನು ಪದವೀಧರರನ್ನು ಆಯ್ಕೆ ಮಾಡಲು ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಸದರಿ ಅರ್ಜಿ ಸಲ್ಲಿಸುವ ದಿನಾಂಕವನ್ನು ಜುಲೈ 31ರವರೆಗೆ ವಿಸ್ತರಿಸಲಾಗಿದೆ. ಆನ್‌ಲೈನ್ ವಿಳಾಸ :www.sw.kar.nic.in (Online Application, Stipend to LAW Graduation) ಆಗಿರುತ್ತವೆ.) ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

## ಡಿಪ್ಲೋಮಾ ಪ್ರವೇಶ ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಸಕ್ತ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪಾಲಿಟೆಕ್ನಿಕ್, ನರಸಾಪುರ, ಬೆಟಗೇರಿ, ಗದಗ ಸಂಸ್ಥೆಯಲ್ಲಿ ಖಾಲಿ ಇರುವ ಡಿಪ್ಲೋಮಾ ಕೋರ್ಸ್ ಸೀಟುಗಳಿಗೆ 2ನೇ ವರ್ಷದ/ತೃತೀಯ ಸೆಮಿಸ್ಟರ್‌ನ ಡಿಪ್ಲೋಮಾ ಪ್ರವೇಶಕ್ಕೆ 2 ವರ್ಷದ ಐ.ಟಿ.ಐ ದ್ವಿತೀಯ ಪಿ.ಯು.ಸಿ. (ವಿಜ್ಞಾನ/ತಾಂತ್ರಿಕ ವಿಷಯಗಳ) ಪಾಸಾದ ಅರ್ಹ ಅಭ್ಯರ್ಥಿಗಳಿಂದ ಪ್ರವೇಶ ಪ್ರಕ್ರಿಯೆಯನ್ನು ಪ್ರಾಂಶುಪಾಲರ ಹಂತದಲ್ಲಿ ಆಫ್‌ಲೈನ್ ಮೂಲಕ ಮೊದಲು ಬಂದವರಿಗೆ ಮೊದಲ ಆದ್ಯತೆ ಮೇರೆಗೆ ಪ್ರವೇಶದ ಅವಧಿಯನ್ನು ಜುಲೈ 28 ರವರೆಗೆ ವಿಸ್ತರಿಸಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಯನ್ನು ಕಾಲೇಜಿನ ಕಚೇರಿ ಅವಧಿಯಲ್ಲಿ ಪಡೆಯಬಹುದಾಗಿದೆ.

## ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಸಕ್ತ ಸಾಲಿಗೆ ಸಮಾಜ ಕಲ್ಯಾಣ ಇಲಾಖಾ ವತಿಯಿಂದ ಅನುಷ್ಠಾನ ಮಾಡಲಾಗುತ್ತಿರುವ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ರಾಜ್ಯ ವಿದ್ಯಾರ್ಥಿವೇತನ ತಂಡದಲ್ಲಿ(www.sw.kar.nic.in) ಅರ್ಜಿ ಹಾಕಲು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಅರ್ಜಿ ಸಲ್ಲಿಸುವ ಅವಧಿಯನ್ನು ಜುಲೈ 31ರ ವರೆಗೆ ವಿಸ್ತರಿಸಿ ಅವಕಾಶ ಕಲ್ಪಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಹೊಸ ಬಸ ನಿಲ್ದಾಣ ಹತ್ತಿರ, ಎಸ್.ಪಿ ಆಫೀಸ್ ಎದುರಿಗೆ ಗದಗ. ದೂರವಾಣಿ:08372-23723 ಇಲ್ಲಿಗೆ ಸಂಪರ್ಕಿಸಬಹುದಾಗಿದೆ.

### ಶಿಥಿಲಾವಸ್ಥೆಯಲ್ಲಿರುವ ಮನೆಗಳಲ್ಲಿ ವಾಸ ಬೇಡ: ಜಿಲ್ಲಾಧಿಕಾರಿ ವೈಶಾಲಿ ಎಂ ಎಲ್ ಸೂಚನೆ

# ಅತಿವೃಷ್ಟಿ ನಿರ್ವಹಣೆಗೆ ಜಿಲ್ಲಾಡಳಿತ ಸನ್ನದ್ಧ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದಾಗಿ ನದಿ, ಹಳ್ಳಗಳ ಪಾತ್ರದಲ್ಲಿ ವಾಸಿಸುವ ಜನರು ಸುರಕ್ಷಿತ ತಾಣಗಳಿಗೆ ಸ್ಥಳಾಂತರವಾಗಬೇಕು. ಅಧಿಕಾರಿಗಳು ಕೇಂದ್ರ ಸ್ಥಳದಲ್ಲಿಯೇ ಇದ್ದು, ಪರಿಸ್ಥಿತಿಯನ್ನು ಸಮರ್ಪಕವಾಗಿ ನಿರ್ವಹಿಸುವಂತೆ ಸೂಚನೆ ನೀಡಲಾಗಿದೆ ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ ಎಲ್ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಜಿಲ್ಲಾಧಿಕಾರಿಗಳು, ಜನ-ಜಾನುವಾರುಗಳ ಜೀವ ಹಾನಿ ಆಗದಂತೆ ಮುಂಜಾಗೃತಾ ಕ್ರಮಗಳನ್ನು ವಹಿಸಬೇಕು. ತಗ್ಗು ಪ್ರದೇಶದಲ್ಲಿ ವಾಸಿಸುತ್ತಿರುವ ಜನ-ಜಾನುವಾರುಗಳನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲು ಅಧಿಕಾರಿಗಳು ಕಾರ್ಯಪ್ರವೃತ್ತರಾಗಬೇಕು. ಜಿಲ್ಲೆಯಲ್ಲಿ ಯಾವುದೇ ಕಾರಣಕ್ಕೂ ಮಳೆ ಹಾಗೂ ಪ್ರವಾಹದಿಂದ ಜನ-ಜಾನುವಾರುಗಳ ಜೀವ ಹಾನಿ ಆಗದಂತೆ ನಿಗಾವಹಿಸಬೇಕು ಎಂದು ತಿಳಿಸಿದ್ದಾರೆ.

ಶಿಥಿಲಾವಸ್ಥೆಯಲ್ಲಿರುವ ಮಣ್ಣಿನ ಮನೆಯಲ್ಲಿ ವಾಸಿಸುವ ಕುಟುಂಬಗಳನ್ನು ಗುರುತಿಸಿ ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸುವ ಕಾರ್ಯ ಕೈಗೊಳ್ಳಬೇಕು.

ವಿದ್ಯುತ್ ಕಂಬಗಳಿಗೆ ಜಾನುವಾರುಗಳನ್ನು ಕಟ್ಟದಂತೆ ಹಾಗೂ ಜನರು ಕಂಬಗಳನ್ನು ಸ್ಪರ್ಶಿಸದಂತೆ ಜಾಗೃತಿ ಮೂಡಿಸಬೇಕು.

ಅಗತ್ಯವಾದಲ್ಲಿ ಕಾಳಜಿ ಕೇಂದ್ರಗಳನ್ನು ತೆರೆದು ಜನ-ಜಾನುವಾರುಗಳನ್ನು ಸ್ಥಳಾಂತರಿಸಿ ಸಂಭವನೀಯ ಜೀವಹಾನಿ ತಡೆಗಟ್ಟಬೇಕು.

ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ ಮಳೆ ನೀರು ಸರಾಗವಾಗಿ ಹರಿದು ಹೋಗಲು ಎಲ್ಲ ಚರಂಡಿ ಹಾಗೂ ರಾಜ ಕಾಲುವೆಗಳನ್ನು ಸ್ವಚ್ಛಗೊಳಿಸಲು ಸ್ಥಳೀಯ ಆಡಳಿತಕ್ಕೆ ಸೂಚಿಸಲಾಗಿದೆ. ಒಟ್ಟಾರೆಯಾಗಿ ಅಧಿಕಾರಿ/ಸಿಬ್ಬಂದಿಗಳೆಲ್ಲರೂ ನಿರಂತರವಾಗಿ ಸಮನ್ವಯ ಸಾಧಿಸುವ ಮೂಲಕ ಎದುರಾಗಬಹುದಾದ ಪ್ರವಾಹ ಪರಿಸ್ಥಿತಿಯನ್ನು ಸಮರ್ಪಕವಾಗಿ



ನಿಭಾಯಿಸಲು ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

**ಮಳೆ ವಿವರ:** ಜುಲೈ 1ರಿಂದ ಈವರೆಗೆ ಜಿಲ್ಲೆಯಲ್ಲಿ 91 ಮಿ.ಮೀ ಮಳೆಯಾಗಿದೆ. ವಾಡಿಕೆ ಮಳೆ 51 ಮಿ.ಮೀ ಇದ್ದು, ಶೇ.79ರಷ್ಟು ಹೆಚ್ಚು ಮಳೆಯಾಗಿದೆ. ಮಳೆಯಿಂದಾಗಿ ಜಿಲ್ಲೆಯಲ್ಲಿ 24 ಮನೆಗಳು ಭಾಗಶಃ ಹಾನಿಗೀಡಾಗಿವೆ.

**ಜಲಾಶಯ ಮಟ್ಟ:** ನವಿಲು ತೀರ್ಥ ಜಲಾಶಯ 37.785 ಟಿಎಂಸಿ ಸಾಮರ್ಥ್ಯ ಹೊಂದಿದ್ದು, ಈವರೆಗೆ 9.314 ಟಿಎಂಸಿ ನೀರು ಸಂಗ್ರವಾಗಿದೆ. ನೀರಿನ ಒಳ ಹರಿವು 21247 ಕ್ಯೂಸೆಕ್ ಇದ್ದು, ಹೊರ ಹರಿವು 194 ಕ್ಯೂಸೆಕ್ ಇದೆ. ಭದ್ರಾ ಜಲಾಶಯ 71.535 ಟಿಎಂಸಿ ಸಾಮರ್ಥ್ಯ ಹೊಂದಿದ್ದು, ಈವರೆಗೆ 29.653 ಟಿಎಂಸಿ ನೀರು ಸಂಗ್ರಹವಾಗಿದೆ. ನೀರಿನ ಒಳ ಹರಿವು 39348 ಕ್ಯೂಸೆಕ್ ಇದ್ದು, ಹೊರ ಹರಿವು 167 ಕ್ಯೂಸೆಕ್ ಇದೆ.

> ಜಿಲ್ಲೆಯಲ್ಲಿ ಪ್ರವಾಹ ಸಂಭವಿಸಬಹುದಾದ 25 ಗ್ರಾಮ ಪಂಚಾಯಿತಿಗಳಲ್ಲಿ ವಿಪತ್ತು ನಿರ್ವಹಣಾ ಯೋಜನೆ ತಯಾರಿಸಲಾಗಿದೆ. ಪ್ರವಾಹ ಪರಿಸ್ಥಿತಿ ನಿರ್ವಹಣೆಗಾಗಿ ಜಿಲ್ಲಾ ಹಾಗೂ ತಾಲೂಕು ಮಟ್ಟದ ನೋಡಲ್ ಅಧಿಕಾರಿಗಳನ್ನು ನೇಮಿಸಲಾಗಿದೆ. ಜಿಲ್ಲೆಯಲ್ಲಿ 56 ಕಾಳಜಿ ಕೇಂದ್ರಗಳನ್ನು ಗುರುತಿಸಲಾಗಿದ್ದು, ಪ್ರತಿ ಕೇಂದ್ರಕ್ಕೂ ಪ್ರತ್ಯೇಕ ನೋಡಲ್ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಬೆಳೆ ಹಾಗೂ ಮನೆ ಹಾನಿ ಸಂಭವಿಸಿದ್ದಲ್ಲಿ ಸಮೀಕ್ಷೆಗಾಗಿ ಪ್ರತ್ಯೇಕ ತಂಡಗಳನ್ನು ರಚಿಸಲಾಗಿದೆ.
>
> **- ವೈಶಾಲಿ ಎಂ ಎಲ್.**
> ಗದಗ ಜಿಲ್ಲಾಧಿಕಾರಿಗಳು.

ಬಿತ್ತನೆ ಪ್ರದೇಶದ ವಿವರ: ಪ್ರಸಕ್ತ ಸಾಲಿನಲ್ಲಿ ಜಿಲ್ಲೆಯಲ್ಲಿ 3,09,810 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯ ಗುರಿ ಹೊಂದಲಾಗಿದ್ದು, ಈ ಪೈಕಿ 1,01,905 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿದೆ. ಶೇಕಡಾವಾರು ಪ್ರಮಾಣ 32.89 ಆಗಿದೆ. 60,575 ಹೆಕ್ಟೇರ್ ತೋಟಗಾರಿಕಾ ಪ್ರದೇಶದಲ್ಲಿ ಬಿತ್ತನೆ ಗುರಿ ಹೊಂದಲಾಗಿತ್ತು. ಈ ಪೈಕಿ 14,294 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿದ್ದು, ಶೇ.23.60ರಷ್ಟು ಗುರಿ ಸಾಧನೆಯಾಗಿದೆ.

### ವಿಜ್ಞಾನ ವಿಷಯಗಳನ್ನು ತಿಳಿಯುವ ಕುತೂಹಲದ ಕಿಡಿ ಕಾರ್ಯಕ್ರಮದಲ್ಲಿ ಡಿಸಿ ವೈಶಾಲಿ.ಎಂ. ಎಲ್ ಮಕ್ಕಳಿಗೆ ಕರೆ

# ಪ್ರಶ್ನೆ ಕೇಳುವ ಮನೋಭಾವ ರೂಢಿಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳು ಪ್ರಶ್ನೆ ಕೇಳುವ ಮನೋಭಾವ ರೂಡಿಸಿಕೊಳ್ಳಬೇಕು ಹಾಗೂ ಜಿಲ್ಲೆಯಲ್ಲಿ ವಿದ್ಯಾರ್ಥಿಗಳ ಏಳ್ಗೆಗಾಗಿ ಇಂತಹ ಕಾರ್ಯಕ್ರಮಗಳ ಆಯೋಜಿಸಬೇಕು. ವಿದ್ಯಾರ್ಥಿಗಳು ತಮ್ಮ ಮುಂದಿನ ದಿನಗಳಲ್ಲಿ ಒಬ್ಬ ವಿಜ್ಞಾನ ತಂತ್ರಜ್ಞಾನ ಬಳಸಿ ತಮ್ಮ ಭವಿಷ್ಯವನ್ನು ತಾವೇ ರೂಪಿಸಿಕೊಂಡು ಸಮಾಜದಲ್ಲಿ ಆದರ್ಶ ವ್ಯಕ್ತಿಗಳಾಗಬೇಕು ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಅವರು ಸ್ಥಳೀಯ ಸಿದ್ದಲಿಂಗನಗರದ ಸರಕಾರಿ ಪ್ರೌಢಶಾಲೆಯಲ್ಲಿ ಸಾರೆ ತಾರೆ ಜಮೀನ ಪರ್ ಟ್ರಸ್ಟ್ ಸಂಸ್ಥೆಯಿಂದ ಕುತೂಹಲದ ಕಿಡಿ ಯೋಜನೆಯಡಿ



ವಿಜ್ಞಾನ ಮತ್ತು ಗಣಿತದಿಂದ ಕುತೂಹಲಕಾರಿ ವಿಷಯವನ್ನು ತಿಳಿಯುವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

ಅಬಾಟ್‌ನಲ್ಲಿ ಸಾರ್ವಜನಿಕ ವ್ಯವಹಾರಗಳ ನಿರ್ದೇಶಕರಾದ ಆನಂದ್ ಕಡಕೋಳ ಅವರು ಮಾತನಾಡಿ, ಮಕ್ಕಳಿಗೆ ಗಣಿತ ಹಾಗೂ ವಿಜ್ಞಾನ ವಿಷಯಗಳ ಬಗ್ಗೆ ಹೆಚ್ಚಿನ ಆಸಕ್ತಿಯಿಂದ ಅಧ್ಯಯನ ನಡೆಸಬೇಕು. ಮತ್ತು ಪ್ರಾಯೋಗಿಕ ವಿಷಯಗಳ ಬಗ್ಗೆ ತಿಳಿದುಕೊಳ್ಳುವುದು ಅವಶ್ಯಕವಾಗಿದೆ ಎಂದರು.

ಸಾರೆ ತಾರೆ ಜಮೀನ್ ಪರ ಸಂಸ್ಥೆಯ ಸ್ಥಾಪಕ ದಿನೇಶ ಬಡಗಂಡಿಯವರು ವಿದೇಶಗಳಲ್ಲಿ ಸುಮಾರು 20 ವರ್ಷಗಳ ಕಾಲ ಸೇವೆ ಸಲ್ಲಿಸಿದ ಬಗೆಯನ್ನು ವಿವರಿಸಿದ ಅವರು ವಿದೇಶದಲ್ಲಿ ಮಕ್ಕಳಿಗೆ ಕಲಿಕೆಯಲ್ಲಿ ಸಿಗುವ ಸೌಲಭ್ಯಗಳು ನಮ್ಮ ದೇಶದ ಇದುವರೆಗೂ ಈ ಯೋಜನೆ ಅಡಿಯಲ್ಲಿ ಬೆಂಗಳೂರು ಹಾಗೂ ಮೈಸೂರು ಭಾಗಗಳಲ್ಲಿ ಸುಮಾರು 6 ಸಾವಿರಕ್ಕಿಂತ ಹೆಚ್ಚು ವಿದ್ಯಾರ್ಥಿಗಳು ಫಲಾನುಭವಿಗಳಾಗಿದ್ದಾರೆ. "ಕುತೂಹಲದ ಕಿಡಿ" ಎಂಬ ಯೋಜನೆಯಲ್ಲಿ ಪ್ರತಿ ಮಕ್ಕಳಿಗೆ ವಿಜ್ಞಾನ ಕಿಟ್ ನೀಡಿ ಅವರಿಗೆ ವೈಜ್ಞಾನಿಕ ಪ್ರಯೋಗಗಳನ್ನು ಮಾಡಿಸುವುದು, ರಸಪ್ರಶ್ನೆ ನಡೆಸುವುದು, ವಿಜ್ಞಾನಿಗಳಿಂದ ಸಂವಾದ ಕಾರ್ಯಕ್ರಮ ಮತ್ತು ಮುಂತಾದ ಯೋಜನೆಗಳನ್ನು ಒಳಗೊಂಡಿದೆ ಎಂದರು.

ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಸಾರೆ ತಾರೆ ಜಮೀನ ಪರ್ ಟ್ರಸ್ಟ್ ಪ್ರಿನ್ಸಿಪಾಲ್ ಸೆಕ್ರೆಟರಿ ರಿತೇಶ್, ಈ ಕುತೂಹಲದ ಕಿಡಿ ಯೋಜನೆಯನ್ನು ಉತ್ತರ ಕರ್ನಾಟಕದ ಸರ್ಕಾರಿ ಶಾಲೆಗಳಲ್ಲಿ ನಡೆಸಲು ದಿನೇಶ್ ಬಾಡಗಂಡಿ ಅವರು ಉತ್ತರ ಕರ್ನಾಟಕದ ಗದಗ ಜಿಲ್ಲೆಯನ್ನು ಆಯ್ಕೆ ಮಾಡಿಕೊಂಡು ಜಿಲ್ಲಾಡಳಿತ ಹಾಗೂ ಜಿಲ್ಲಾಧಿಕಾರಿಗಳ ಸಲಹೆಯಂತೆ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು.

ಇದೇ ಸಂದರ್ಭದಲ್ಲಿ ವಿಜ್ಞಾನ ವಿಷಯದ ಬಗ್ಗೆ ಆಸಕ್ತಿ ಮೂಡಿಸಲು ವಿಜ್ಞಾನ ಮೇಳವನ್ನು ಆಯೋಜಿಸಲಾಗಿತ್ತು

ಈ ಮೇಳದಲ್ಲಿ ಶಾಲೆಯ ಎಂಟನೇ ತರಗತಿಯ ವಿದ್ಯಾರ್ಥಿ ಮಂಜುನಾಥ, ▸▸3ನೇ ಪುಟಕ್ಕೆ

## ಸೇವಾ ಕೇಂದ್ರಗಳೆದುರು 'ಗೃಹಲಕ್ಷ್ಮೀ'ಯರ ಸಾಲು



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗೃಹಲಕ್ಷ್ಮೀ ಯೋಜನೆಗೆ ಅರ್ಜಿ ಸಲ್ಲಿಕೆಗೆ ಸೋಮವಾರ ಬಿಡುವಿಲ್ಲದ ಮಳೆಯ ನಡುವೆಯೂ ಮಹಿಳೆಯರು ಸೇವಾ ಕೇಂದ್ರಕ್ಕೆ ಮುಗಿಬಿದ್ದರು. ಅರ್ಜಿ ಸ್ವೀಕೃತಿ ಕಾರ್ಯ ಶನಿವಾರ ತಾಂತ್ರಿಕ ತೊಂದರೆ ಮತ್ತು ಭಾನುವಾರ ರಜಾ ದಿನದ ಕಾರಣದಿಂದ ಬಂದ್ ಆಗಿತ್ತು. ಹೀಗಾಗಿ, ಸೋಮವಾರ ನಸುಕಿನಲ್ಲಿಯೇ ಸೇವಾ ಕೇಂದ್ರದ ಮುಂದೆ ಸಾಲು ಹಚ್ಚಲಾಗಿತ್ತು.

ಪಟ್ಟಣದಲ್ಲಿ 5 ಕಡೆ ಮತ್ತು ಗ್ರಾಮೀಣ ಪ್ರದೇಶದಲ್ಲಿ ಗ್ರಾಪಂ ಮತ್ತು ಗ್ರಾಮ ಒನ್ ಸೇವಾ ಕೇಂದ್ರಗಳಲ್ಲಿ ಅರ್ಜಿ ಸ್ವೀಕರಿಸಲಾಗುತ್ತಿದೆ. ಅರ್ಜಿಗಳ ಸ್ವೀಕೃತಿ ಕಾರ್ಯ ಸರಾಗವಾಗಿ ಸಾಗುತ್ತಿದ್ದರೂ ಸರ್ವರ್ ಸಮಸ್ಯೆ ಮಾತ್ರ ತಪ್ಪದಂತಾಗಿದೆ. ಪಡಿತರ ಕಾರ್ಡ್‌ನಲ್ಲಿರುವ ಕುಟುಂಬದ ಮುಖ್ಯಸ್ಥೆಯರ ▸▸3ನೇ ಪುಟಕ್ಕೆ

## ಕಾನೂನು ಸುವ್ಯವಸ್ಥೆ ಕಾಪಾಡಲು ಸಿಸಿ ಟಿವಿ ಅಳವಡಿಸಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ನಿರ್ದೇಶನದಂತೆ ಅಪರಾಧ ಪತ್ತೆ ಹಾಗೂ ಪ್ರತಿಯೊಬ್ಬರೂ ಕಾನೂನು ಸುವ್ಯವಸ್ಥೆ ಕಾಪಾಡಲು ಸಿಸಿ ಟಿವಿ ಅಳವಡಿಸಿಕೊಂಡು ಇಲಾಖೆಗೆ ಸಹಕಾರ ನೀಡಬೇಕೆಂದು ಶಿರಹಟ್ಟಿ ಪಿಎಸ್‌ಐ ಈರಣ್ಣ ರಿತ್ತಿ ಹೇಳಿದರು.

ಅವರು ಸೋಮವಾರ ಶಿರಹಟ್ಟಿ ತಾಲೂಕಿನ ಮಾಗಡಿ ಗ್ರಾಮ ಪಂಚಾಯತ ವತಿಯಿಂದ ಅಳವಡಿಸಲಾಗಿರುವ ಸಿಸಿ ಟಿವಿ ಕುರಿತು ಮಾಹಿತಿ ನೀಡಿ ಮಾತನಾಡಿದರು.




ತಾಲೂಕಿನ ಎಲ್ಲ ಬೀಟ್‌ಗಳಲ್ಲಿಯೂ ಸಹ ಸಿಸಿ ಟಿವಿ ಅಳವಡಿಸಲಾಗುತ್ತಿದೆ. ಪ್ರಮುಖವಾಗಿ ಬೆಳ್ಳಟ್ಟಿ ಜಂಕ್ಷನ್, ಛಬ್ಬಿ, ಹೊಳೆ-ಇಟಗಿ ಹಾಗೂ ಬನ್ನಿಕೊಪ್ಪ ಗ್ರಾಮಗಳಲ್ಲಿಯ ಆಯಕಟ್ಟಿನ ಸ್ಥಳಗಳಲ್ಲಿ ಸಿಸಿ ಟಿವಿಗಳನ್ನು ▸▸3ನೇ ಪುಟಕ್ಕೆ

### ಪ್ರವಾಸೋದ್ಯಮ ಸಚಿವರಾದ ಬಳಿಕ ಮೊದಲ ಬಾರಿಗೆ ಎಚ್ ಕೆ ಪಾಟೀಲ ಮೈಸೂರು ಭೇಟಿ


# ಪಾರಂಪರಿಕ ಕಟ್ಟಡ ರಕ್ಷಣೆಗೆ ಪ್ರಾಮಾಣಿಕ ಪ್ರಯತ್ನ

■ವಿಜಯಸಾಕ್ಷಿ ಸುದ್ದಿ, ಮೈಸೂರು

ಮೈಸೂರಿನಲ್ಲಿರುವ ಪಾರಂಪರಿಕ ಕಟ್ಟಡಗಳ ರಕ್ಷಣೆಗೆ ಸರ್ಕಾರ ಪ್ರಾಮಾಣಿಕ ಪ್ರಯತ್ನ ಮಾಡಲಿದೆ.

ಮೈಸೂರಿಗೆ ಬರುವ ಪ್ರವಾಸಿಗರಿಗೆ ಕ್ಯೂಆರ್ ಕಾರ್ಡ್ ವಿತರಣೆಗೆ ಚಿಂತಿಸಲಾಗಿದೆ ಎಂದು ಪ್ರವಾಸೋದ್ಯಮ ಸಚಿವ ಎಚ್ ಕೆ ಪಾಟೀಲ ತಿಳಿಸಿದರು.

ಮೈಸೂರಿನಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಚಿವ ಹೆಚ್ ಕೆ ಪಾಟೀಲ, ನಾನು ಪ್ರವಾಸೋದ್ಯಮ ಮತ್ತು ಕಾನೂನು ವ್ಯವಹಾರ ಸಚಿವನಾದ



ಮೇಲೆ ಮೈಸೂರಿಗೆ ಮೊದಲ ಬಾರಿಗೆ ಭೇಟಿ ನೀಡುತ್ತಿದ್ದೇನೆ.

> ಮೈಸೂರಿಗೆ ವಾರ್ಷಿಕ 50 ಲಕ್ಷಕ್ಕೂ ಹೆಚ್ಚು ಪ್ರವಾಸಿಗರು ಆಗಮಿಸುತ್ತಾರೆ. ಹಾಗಾಗಿ ಬರುವ ಪ್ರವಾಸಿಗರಿಗೆ ಜನಸ್ನೇಹಿ ಪ್ರವಾಸೋದ್ಯಮ ಕಲ್ಪಿಸಬೇಕು.
>
> ಪ್ರವಾಸಿಗರಿಗೆ ಟೂರಿಸ್ಟ್ ಪೊಲೀಸ್ ವ್ಯವಸ್ಥೆ ಕಲ್ಪಿಸಲು ಆಲೋಚನೆ ಮಾಡಲಾಗಿದೆ. ಪ್ರವಾಸಿಗರಿಗೆ ಅನುಕೂಲವಾಗುವಂತೆ ಟೂರಿಸ್ಟ್ ಪೊಲೀಸ್ ಅವಶ್ಯಕತೆ ಇದೆ ಅನ್ನಿಸುತ್ತಿದೆ. ಟೂರಿಸ್ಟ್ ಎಂಟ್ರಿ ಪಾಸ್ ಕೊಡಲು ಸಹ ಚಿಂತನೆ ನಡೆಸಲಾಗಿದೆ.
>
> ಇದರಿಂದ ಮೈಸೂರಿನ ಎಲ್ಲಾ ಕಡೆ ಟಿಕೆಟ್ ಪಡೆಯುವುದು ತಪ್ಪುತ್ತದೆ. ಪಾಸ್‌ನಲ್ಲಿ ಕ್ಯೂಆರ್ ಕೋಡ್ ತರುವ ಚಿಂತನೆಯೂ ಇದೆ. ಅಧಿಕಾರಿಗಳೊಂದಿಗೆ ಚರ್ಚಿಸಿ ಈ ಬಗ್ಗೆ ತೀರ್ಮಾನ ಮಾಡುತ್ತೇವೆ.
>
> **- ಎಚ್ ಕೆ ಪಾಟೀಲ.**
> ಪ್ರವಾಸೋದ್ಯಮ ಸಚಿವರು.

ನಾನು ಮೈಸೂರಿಗೆ ಬಂದ ಉದ್ದೇಶವೇ ಪ್ರವಾಸೋದ್ಯಮ ಬಗ್ಗೆ ಅಧ್ಯಯನ ಮಾಡಲು. ಮೈಸೂರು ಜಿಲ್ಲೆ ಸಾಂಸ್ಕೃತಿಕ ರಾಜಧಾನಿಯೆಂದೇ ಹೆಸರಾಗಿದೆ.

ಕರ್ನಾಟಕದ ಭವ್ಯ ಪರಂಪರೆಯಲ್ಲಿ ವಿಶ್ವ ವಿಖ್ಯಾತ ತಾಣವಾಗಿದೆ.

ಪ್ರವಾಸೋದ್ಯಮ ಅಧ್ಯಯನ ಮಾಡಲು ಮೈಸೂರು ಉತ್ತಮ ಕೇಂದ್ರ. ಮೈಸೂರಿನ ಪ್ರವಾಸೋದ್ಯಮವನ್ನು ಅಭಿವೃದ್ಧಿ ಮಾಡಲು ಸಾಕಷ್ಟು ಮಾಹಿತಿಗಳನ್ನು ಅಧಿಕಾರಿಗಳಿಂದ ಪಡೆದಿದ್ದೇನೆ ಎಂದರು.

ಪಾರಂಪರಿಕ ಕಟ್ಟಡಗಳ ಸಂರಕ್ಷಣೆಗೆ ಸರ್ಕಾರ ಹೆಚ್ಚಿನ ಒತ್ತು ನೀಡಲಿದೆ.

ಈ ಬಗ್ಗೆ ಮುಖ್ಯಮಂತ್ರಿಗಳ ಗಮನಕ್ಕೆ ತರಲಾಗುವುದು. ಜಂಗಲ್ ರೆಸಾರ್ಟ್ ಟೂರಿಸಮ್ ಡೆವಲಪ್‌ಮೆಂಟ್‌ಗೆ ಹಿರಿಯ ನಾಗರಿಕರು ಮತ್ತು ಕಾಲೇಜು ವಿದ್ಯಾರ್ಥಿಗಳಿಗೆ ಪ್ಯಾಕೇಜ್ ಟೂರ್ ಮೂಲಕ ಅವಕಾಶ ಮಾಡಿಕೊಡುವ ನಿಟ್ಟಿನಲ್ಲಿ ಚಿಂತನೆ ಮಾಡಲಾಗಿದೆ.

ಈ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚಿಸಿ ಈಗಾಗಲೇ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.

## ಮಾಹಿತಿ ಹಕ್ಕು ನಿಯಮ ಎಂಬ ಎಚ್ಚರಿಕೆಯ ಘಂಟೆ

■ವಿಜಯಸಾಕ್ಷಿ ಸುದ್ದಿ, ಗದಗ

ಮಾಹಿತಿ ಹಕ್ಕು ಆಯೋಗದ ಮಾಜಿ ಅಧ್ಯಕ್ಷ, ಖ್ಯಾತ ವೈದ್ಯ ಡಾ. ಶೇಖರ್ ಸಜ್ಜನ್ ತಾವು ಬರೆದ ಮಾಹಿತಿ ಹಕ್ಕಿನ ಮಹತ್ವದ ಕುರಿತ ಪುಸ್ತಕವನ್ನು ಬೆಂಗಳೂರಿನಲ್ಲಿ ಸಭಾಪತಿ ಬಸವರಾಜ ಹೊರಟ್ಟಿ ಅವರಿಗೆ ನೀಡಿದರು.



ಸರ್ಕಾರದ ಪ್ರತಿಯೊಂದು ವಿಷಯದ ಮಾಹಿತಿಯನ್ನು ಮಾಹಿತಿ ಹಕ್ಕಿನ ಮೂಲಕ ತಿಳಿದುಕೊಳ್ಳಬಹುದು.

ಸರಕಾರಕ್ಕೂ ಕೂಡ ನಿತ್ಯ ಪ್ರಾಮಾಣಿಕತೆಯಿಂದ ಕೆಲಸ ಮಾಡುವ ಜವಾಬ್ದಾರಿ ಹೆಚ್ಚುತ್ತದೆ. ಇದು ಅತ್ಯಂತ ಮಹತ್ವದ ಕಾನೂನು ಆಗಿರುವುದರಿಂದ ಇದರ ಸದುಪಯೋಗವನ್ನು ಪ್ರತಿಯೊಬ್ಬ ಪ್ರಜೆಯೂ ಪಡೆಯಬೇಕು ಎಂದು ಡಾ.ಶೇಖರ್ ನುಡಿದರು.

ಸಭಾಪತಿ ಬಸವರಾಜ ಹೊರಟ್ಟಿ ಅವರು ಮಾತನಾಡಿ, ಇಂತಹ ಕಾನೂನುಗಳು ಇರುವುದರಿಂದ ಆಡಳಿತ ವ್ಯವಸ್ಥೆ ಜಾಗೃತೆಯಿಂದ ಕೆಲಸ ಮಾಡಲು ಸಾಧ್ಯವಾಗುತ್ತದೆ. ಈ ಕಾನೂನು ಕುರಿತು ಜನರಿಗೆ ಅರಿವು ಮೂಡಿಸಲು ಈ ಪುಸ್ತಕ ಅತ್ಯಂತ ಉಪಯುಕ್ತವಾಗಿದೆ.

ಡಾ.ಸಜ್ಜನ್ ಅವರಿಂದ ಇನ್ನಷ್ಟು ಸಾರ್ವಜನಿಕರಿಗೆ ಉಪಯುಕ್ತವಾಗುವ ಪುಸ್ತಕಗಳು ಹೊರಬರಲಿ ಎಂದು ಆಶಿಸಿ ಶುಭ ಕೋರಿದರು. ಈ ಸಂದರ್ಭದಲ್ಲಿ ಡಾ. ಬಸವರಾಜ್ ಧಾರವಾಡ ಉಪಸ್ಥಿತರಿದ್ದರು.

## ಕರಾವಳಿ ಕರ್ನಾಟಕದಲ್ಲಿ ಮಳೆಯ ಆರ್ಭಟ: ನದಿಗಳ ಹರಿವಿನ ಮಟ್ಟ ಏರಿಕೆ

■ವಿಜಯಸಾಕ್ಷಿ ಸುದ್ದಿ, ದಕ್ಷಿಣ ಕನ್ನಡ:

ಕರ್ನಾಟಕದ ಉಡುಪಿ ಹಾಗೂ ದಕ್ಷಿಣ ಕನ್ನಡದಲ್ಲಿ ಮಳೆಯ ಆರ್ಭಟ ಹೆಚ್ಚಾಗಿದ್ದು, ಹಲವು ನದಿಗಳು ಉಕ್ಕಿ ಹರಿಯುತ್ತಿವೆ.

ತಗ್ಗು ಪ್ರದೇಶಗಳು ಮಳೆಯ ತೀವ್ರತೆಗೆ ಜಲಾವೃತಗೊಂಡಿವೆ. ನೇತ್ರಾವತಿ, ಫಲ್ಗುಣಿ ಹಾಗೂ ಹಲವು ತೊರೆಗಳಲ್ಲಿನ ನೀರಿನ ಮಟ್ಟ ಏರಿಕೆಯಾಗಿದ್ದು ದಕ್ಷಿಣ ಕನ್ನಡದಲ್ಲಿ ನದಿ ದಡದಲ್ಲಿ ವಾಸಿಸುವ ಜನರಿಗೆ ಅಪಾಯತಂದೊಡ್ಡಿದೆ.

ಬಂಟ್ವಾಳ ತಾಲೂಕಿನಲ್ಲಿ ಕೆಲವು ಕುಟುಂಬಗಳನ್ನು ಸುರಕ್ಷಿತ ಪ್ರದೇಶಗಳಿಗೆ ವರ್ಗಾವಣೆ ಮಾಡಲಾಗಿದೆ. ತಾಲ್ಲೂಕಿನಲ್ಲಿ ಅಡಿಕೆ ತೋಟಗಳೂ ಸಹ ಮುಳುಗಡೆಯಾಗಿದ್ದು, ರೈತರಲ್ಲಿ ಆತಂಕ ಮೂಡಿಸಿದೆ.

ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳಲ್ಲಿ ಶಾಲೆಗಳಿಗೆ ರಜೆ ಘೋಷಿಸಲಾಗಿದೆ. ಇನ್ನು ಪ್ರಸಿದ್ಧ ಕ್ಷೇತ್ರ ಸುಬ್ರಹ್ಮಣ್ಯದಲ್ಲಿ ಸ್ನಾನಘಟ್ಟ ಮುಳುಗಡೆಯಾಗಿದ್ದು, ದೇವಾಲಯಕ್ಕೆ ಬರುವ ಭಕ್ತರಿಗೆ ಕುಮಾರಧಾರ ನದಿಗೆ ತೆರಳದಂತೆ ಎಚ್ಚರಿಕೆ ನೀಡಲಾಗಿದೆ.

## ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

2023- 24ನೇ ಸಾಲಿನ ಹುಬ್ಬಳ್ಳಿ ತಾಲೂಕಿನ ತೋಟಗಾರಿಕೆ ಇಲಾಖೆ ವತಿಯಿಂದ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಗಳಡಿಯಲ್ಲಿ ಅರ್ಹ ಫಲಾನುಭವಿಗಳ ಆಯ್ಕೆಗಾಗಿ ತಾಲೂಕಿನ ತೋಟಗಾರಿಕೆ ಬೆಳೆಗಾರರು ಹಾಗೂ ರೈತ ಉತ್ಪಾದಕ ಕಂಪನಿಯ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ.

ರಾಷ್ಟ್ರೀಯ ತೋಟಗಾರಿಕ ಮಿಷನ್ ಯೋಜನೆಯಡಿಯಲ್ಲಿ ಹಣ್ಣು(ಬಾಳೆ, ಸ್ಟ್ರಾಬೆರಿ), ಹೈಬ್ರಿಡ್ ತರಕಾರಿಗಳ ಪ್ರದೇಶ ವಿಸ್ತರಣೆ ಮತ್ತು ಹೂವು ಪ್ರದೇಶ ವಿಸ್ತರಣೆ (ಕತ್ತರಿಸಿದ ಹೂ, ಗಡ್ಡೆ ಜಾತಿಯ ಹೂ, ಬಿಡಿ ಹೂ) ವೈಯಕ್ತಿಕ ಕೃಷಿಹೊಂಡ, ಸಮುದಾಯ ಕೃಷಿಹೊಂಡ, ಪ್ಲಾಸ್ಟಿಕ್ ಮಲ್ಚಿಂಗ್, ಹಣ್ಣು ಮಾಗಿಸುವ ಘಟಕ, ಈರುಳ್ಳಿ ಶೇಖರಣಾ ಘಟಕ, ಪ್ಯಾಕ್ ಹೌಸ್ ಹಾಗೂ ತಳ್ಳುವ ಗಾಡಿ ಘಟಕಗಳ ರೈತರಿಗೆ ಸಹಾಯಧನ ಸೌಲಭ್ಯಗಳಿರುತ್ತವೆ. ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಹೂವಿನ ಮತ್ತು ಹಣ್ಣಿನ ಬೆಳೆಗಳಿಗೆ ಪ್ರದೇಶ ವಿಸ್ತರಣೆಗೆ ರೈತರಿಗೆ ಸಹಾಯಧನ ಸೌಲಭ್ಯಗಳಿರುತ್ತವೆ. ಸಹಾಯಧನಕ್ಕಾಗಿ ಅರ್ಜಿ ಸಲ್ಲಿಸುವ ರೈತರು ಸ್ವಂತ ಜಮೀನು ಮತ್ತು ನೀರಾವರಿ ಸೌಲಭ್ಯ ಹೊಂದಿರಬೇಕು. ಆಧಾರ ಕಾರ್ಡ್, ಮತದಾರರ ಗುರುತಿನ ಚೀಟಿ, ಗಣಕೀಕೃತ ಬೆಳೆ ದೃಢೀಕರಣ ಪತ್ರ ಹಾಗೂ ರಾಷ್ಟ್ರೀಕೃತ ಬ್ಯಾಂಕುಗಳ ಪಾಸ್ ಬುಕ್ ಗಳನ್ನು ಹೊಂದಿರಬೇಕು (ಈಖಆ ಸಂಖ್ಯೆ ಹೊದಿರಬೇಕು). ಪರಿಶಿಷ್ಟ ಜಾತಿ 17%, ಪರಿಶಿಷ್ಟ ಪಂಗಡ 7%, ಮಹಿಳೆ 33% ಅಲ್ಪಸಂಖ್ಯಾತರು 5 %ಹಾಗೂ ಅಂಗವಿಕಲರಿಗೆ ಶೇ 3 ರಂತೆ ಮೀಸಲಾತಿಗೆ ಆದ್ಯತೆ ನೀಡಲಾಗುವುದು.

ಸಹಾಯಕ ತೋಟಗಾರಿಕೆ ಅಧಿಕಾರಿ, ರೈತ ಸಂಪರ್ಕ ಕೇಂದ್ರ ಹುಬ್ಬಳ್ಳಿ (ಮೊ.ನಂ.9740164868) ಸಹಾಯಕ ತೋಟಗಾರಿಕೆ ಅಧಿಕಾರಿ, ರೈತ ಸಂಪರ್ಕ ಕೇಂದ್ರ, ಛಬ್ಬಿ, (ಮೊ.ನಂ. 9008455128) ಸಹಾಯಕ ತೋಟಗಾರಿಕೆ ಅಧಿಕಾರಿ, ರೈತ ಸಂಪರ್ಕ ಕೇಂದ್ರ ಶಿರಗುಪ್ಪಿ (ಮೊ.ನಂ. 9663474155) ಸಂಪರ್ಕಿಸಿ ಅರ್ಜಿಯನ್ನು ಪಡೆದು ಆಗಸ್ಟ್ 10ರೊಳಗೆ ಅರ್ಜಿಗಳನ್ನು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿಗೆ ಸಲ್ಲಿಸುವಂತೆ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರಾದ ವಿಜಯಕುಮಾರ ರಾಗಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರವಾಸಿಗರ ಪರದಾಟ ತಪ್ಪಿಸಲು ಹಾಗೂ ನೆರವಿಗೆ ಟೂರಿಸ್ಟ್ ಪೊಲೀಸ್ ವ್ಯವಸ್ಥೆಗೆ ಚಿಂತನೆ- ಪ್ರವಾಸೋದ್ಯಮ ಸಚಿವ ಎಚ್.ಕೆ.ಪಾಟೀಲ್

# ಪ್ರವಾಸಿ ತಾಣಗಳ ವೀಕ್ಷಣೆಗೆ ಏಕೀಕೃತ ಪಾಸ್

■ವಿಜಯಸಾಕ್ಷಿ ಸುದ್ದಿ, ಮೈಸೂರು

ಮೈಸೂರಿನ ವಿವಿಧ ಪ್ರವಾಸಿ ಸ್ಥಳಗಳಿಗೆ ಹೋಗಲು ಕ್ಯೂಆರ್ ಕೋಡ್ ಮಾದರಿಯ ಪಾಸ್ ವಿತರಿಸಲಾಗುವುದು ಎಂದು ಕಾನೂನು, ಸಂಸದೀಯ ವ್ಯವಹಾರ ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವ ಎಚ್. ಕೆ. ಪಾಟೀಲ್ ತಿಳಿಸಿದರು.



ಅರಮನೆ ಕಚೇರಿಯಲ್ಲಿ ಏರ್ಪಡಿಸಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮೃಗಾಲಯ, ಅರಮನೆ, ಕಾರಂಜಿಕೆರೆ ಹೀಗೆ ಹಲವು ಪ್ರವಾಸಿ ತಾಣಗಳಿಗೆ ಹೋಗಲು ಪ್ರವಾಸಿಗರು ಟಿಕೆಟ್ ಪಡೆಯಲು ಸರದಿ ಸಾಲಲ್ಲಿ ನಿಲ್ಲಬೇಕು. ಇದರಿಂದ ಸಮಯವೂ ವ್ಯರ್ಥ. ಹಾಗಾಗಿ ಏಕೀಕೃತ ಪಾಸ್ ವ್ಯವಸ್ಥೆ ತರಲು ಚಿಂತಿಸಲಾಗುತ್ತಿದೆ ಎಂದು ತಿಳಿಸಿದರು.

ಪ್ರವಾಸಕ್ಕೆ ಬರುವ ಪ್ರವಾಸಿಗರಿಗೆ ಪ್ರವಾಸದ ಪ್ರೇಕ್ಷಣೀಯ ಸ್ಥಳಗಳಲ್ಲಿ ಯಾವುದಾದರು ತೊಂದರೆ ಅವಘಡಗಳು ಸಂಭವಿಸಿದರೆ ಯಾರಿಗೆ ಹೇಳಬೇಕು ಸ್ಥಳದಲ್ಲಿ ಪೊಲೀಸ್ ಠಾಣೆ ಎಲ್ಲಿದೆ ಎಂಬ ಮಾಹಿತಿ ಇರುವುದಿಲ್ಲ. ಹಾಗಾಗಿ ಪ್ರವಾಸಿಗರ ನೆರವಿಗಾಗಿ ಟೂರಿಸ್ಟ್ ಪೊಲೀಸ್ ವ್ಯವಸ್ಥೆ ಜಾರಿಗೆ ಚಿಂತನೆ ನಡೆಸಿದ್ದೇವೆ.

ಪ್ರವಾಸಿಗರಿಗೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಪೊಲೀಸ್ ವ್ಯವಸ್ಥೆಯೊಂದಿಗೆ ಕ್ಯೂರ್-ಆರ್ ಕೋಡ್ ಬಳಸಿಕೊಂಡು ಹಲವು ಸ್ಥಳಗಳನ್ನು ವೀಕ್ಷಿಸುವ ವ್ಯವಸ್ಥೆಗೂ ಚಾಲನೆ ನೀಡಲು ಉದ್ದೇಶಿಸಲಾಗಿದೆ. ಇದರಿಂದ ಟಿಕೆಟ್ ಕೌಂಟರ್ ಬಳಿ ಗಂಟೆಗಟ್ಟಲೆ ನಿಲ್ಲುವ ಹಾಗೂ ಪ್ರತಿ ಸ್ಥಳದಲ್ಲೂ ಮತ್ತೆ ಮತ್ತೆ ಟಿಕೆಟ್ ತೆಗೆದುಕೊಳ್ಳುವ ಕಷ್ಟ ತಪ್ಪುತ್ತದೆ ಹಾಗೂ ಪಾರ್ಕಿಂಗ್ ವ್ಯವಸ್ಥೆಗೆ ಇದರಿಂದ ಅನುಕೂಲ ಆಗಲಿದೆ ಎಂದರು.

ಕರ್ನಾಟಕದ ಪರಂಪರೆಯನ್ನು ವಿಶ್ವವಿಖ್ಯಾತಿಗೊಳಿಸಿರುವ ಮೈಸೂರು ನಮ್ಮ ಸಂಸ್ಕೃತಿಯ ಪ್ರತೀಕ. ಬೆಳಿಗ್ಗೆ ಚಾಮುಂಡೇಶ್ವರಿ ಬೆಟ್ಟಕ್ಕೆ ಭೇಟಿ ನೀಡಿದ್ದು, ಚಾಮುಂಡಿ ಬೆಟ್ಟದ ಅಭಿವೃದ್ಧಿ ಕುರಿತು ಒಂದಷ್ಟು ಸಲಹೆಗಳನ್ನು ನೀಡಲಾಗಿದೆ. ಪ್ರಸಾದ್ ಯೋಜನೆಯಡಿ ಚಾಮುಂಡಿ ಬೆಟ್ಟದ ಅಭಿವೃದ್ಧಿ ಮಾಡಲಾಗುವುದು. ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಬಜೆಟ್ ಮಂಡಿಸುವಾಗ ಬೆಟ್ಟದ ಅಭಿವೃದ್ಧಿಯಲ್ಲಿ ರಾಜಕೀಯ ಇಚ್ಛಾಶಕ್ತಿಯನ್ನು ವ್ಯಕ್ತಪಡಿಸಿದ್ದರು ಎಂದು ತಿಳಿಸಿದರು.

ದಸರಾ ತಯಾರಿ ಆರಂಭವಾಗಿದ್ದು, ದಸರಾ ಮಹೋತ್ಸವಕ್ಕೆ ನಮ್ಮ ಇಲಾಖೆಯಿಂದ ಆಗಬೇಕಾದ ವ್ಯವಸ್ಥೆಗಳ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚಿಸಿದ್ದೇನೆ. ದಸರಾ ಪ್ರಾಧಿಕಾರ ರಚನೆ ಬಗೆಗೆ ಮುಂಬರುವ ದಿನಗಳಲ್ಲಿ ಚರ್ಚಿಸಲಾಗುವುದು. ಮೈಸೂರಿಗೆ ಒಂದು ವರ್ಷಕ್ಕೆ 50 ಲಕ್ಷ ಜನ ಪ್ರವಾಸಿಗರು ಬರುತ್ತಾರೆ. ಮುಂದಿನ ದಿನಗಳಲ್ಲಿ ಪ್ರವಾಸಿಗರ ಸ್ನೇಹಿ ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸಲಾಗುವುದು. ಸಂಸ್ಕೃತಿ ಇತಿಹಾಸ ಪರಂಪರೆಯ ಪ್ರತೀಕವಾದ ಪಾರಂಪರಿಕ ಕಟ್ಟಡಗಳ ಸಂರಕ್ಷಣೆ ಬಗ್ಗೆ ಸರ್ಕಾರ ವಿಶೇಷ ಕಾಳಜಿವಹಿಸುವುದಾಗಿ ತಿಳಿಸಿದರು.

ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಕಾರ್ಯವೈಖರಿ ನಮಗೆ ಅಸಮಾಧಾನ ತಂದಿದೆ. ಈ ಕುರಿತು ಅಧಿಕಾರಿಗಳಿಂದಲೂ ಅಸಂತೋಷ ವ್ಯಕ್ತವಾಗಿದೆ. ಈ ಬಗ್ಗೆ ಜಿಲ್ಲಾಧಿಕಾರಿ ಒಳಗೊಂಡಂತೆ 3 ಜನರ ಸಮಿತಿ ರಚಿಸಿ 80 ಎಕರೆ ವಿಸ್ತಾರವಾದ ಪ್ರದೇಶವನ್ನು ಯಾವ ರೀತಿ ಬಳಸಿಕೊಂಡು ಅಭಿವೃದ್ಧಿ ಪಡಿಸಬಹುದು ಎನ್ನುವುದರ ಬಗ್ಗೆ 20 ದಿನಗಳಲ್ಲಿ ವರದಿ ನೀಡಲಿದ್ದು, ಆ ನಂತರ ಅಭಿವೃದ್ಧಿ ಬಗ್ಗೆ ಚರ್ಚಿಸಲಾಗುವುದು ಎಂದರು.

ಹತ್ತು ವರ್ಷಗಳ ಬಳಿಕ ಅರಮನೆಯಲ್ಲಿರುವ ಟ್ರೆಜರಿಯನ್ನು ತೆರೆಯಲಾಗಿದ್ದು, ಅದರಲ್ಲಿ 369 ಅಪರೂಪದ ವಸ್ತುಗಳಿವೆ. ತಾಮ್ರಪತ್ರ, ನಟರಾಜ ವಿಗ್ರಹ ಹಾಗೂ ನಾಣ್ಯಗಳು ಸೇರಿದಂತೆ ಹಲವು ವಸ್ತುಗಳು ದೊರೆತ್ತಿದ್ದು, ಅವುಗಳನ್ನು ನೋಡುವ ಅವಕಾಶ ಜನರಿಗೆ ಸಿಗಬೇಕು. ಈ ನಿಟ್ಟಿನಲ್ಲಿ ಜಿಲ್ಲಾಧಿಕಾರಿಗಳ ಹಳೆ ಕಚೇರಿ ಕಟ್ಟಡವು ಪಾರಂಪರಿಕ ಕಟ್ಟಡವಾಗಿದ್ದು ಅದನ್ನು ವಸ್ತು ಪ್ರದರ್ಶನಕ್ಕೆ ಬಳಸಿಕೊಳ್ಳಲಾಗುವುದು ಮತ್ತು ಅದರ ರಕ್ಷಣೆ ನಿರ್ವಹಣೆ ಬಗ್ಗೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಜಂಗಲ್ ಲಾಡ್ಜ್ ಕಂಪನಿಯು 2020-21ರ ವೇಳೆಯಲ್ಲಿ 61 ಕೋಟಿ ವ್ಯವಹಾರ ನಡೆಸಿದ್ದು, 2022-23ಕ್ಕೆ 111 ಕೋಟಿ ವ್ಯವಹಾರ ವಿಸ್ತಾರವಾಗಿದೆ. ಹಿರಿಯ ನಾಗರಿಕರಿಗೆ ಕಾಲೇಜು ವಿದ್ಯಾರ್ಥಿಗಳಿಗೆ ಅಂದರೆ ಪಿಯುಸಿ ಮತ್ತು ಪದವಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿಶೇಷ ಪ್ಯಾಕೇಜ್ ನೀಡುವ ಮೂಲಕ ಶೇ.40 ರಷ್ಟು ಬರುತ್ತಿರುವ ಪ್ರವಾಸಿಗರನ್ನು ಶೇ.70 ರಷ್ಟು ಹೆಚ್ಚಿಸಲು ಯೋಜನೆ ರೂಪಿಸಲಾಗುವುದು. ಹೆಚ್ಚು ಪ್ರವಾಸಿಗರನ್ನು ಆಕರ್ಷಿಸುವ ದೃಷ್ಟಿಯಿಂದ ಮುಂದಿನ ದಿನಗಳಲ್ಲಿ ಒಂದು ಪಾಸ್ ತೆಗೆದುಕೊಂಡು ಹಲವು ಪ್ರೇಕ್ಷಣೀಯ ಸ್ಥಳಗಳನ್ನು ನೋಡಲು ವ್ಯವಸ್ಥೆ ಕಲ್ಪಿಸಲಾಗುವುದು ಎಂದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾಧಿಕಾರಿಗಳಾದ ಡಾ. ಕೆ ವಿ ರಾಜೇಂದ್ರ, ಪ್ರವಾಸೋದ್ಯಮ ಇಲಾಖೆಯ ಎ.ಸಿ.ಎಸ್ ಕಪಿಲ್ ಮೋಹನ್, ಕಾರ್ಯದರ್ಶಿಗಳಾದ ರಾಮ್ ವಿಲಾಸ್ ಪ್ರಸಾದ್, ಬಿ.ಜೆ ವಿಜಯ್ ಕುಮಾರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಸೈಕ್ಲಿಂಗ್ ಜಾಥಾಕ್ಕೆ ಕೃಷ್ಣಗೌಡ ಪಾಟೀಲ್ ಚಾಲನೆ

■ವಿಜಯಸಾಕ್ಷಿ ಸುದ್ದಿ, ಗದಗ

ಯುವ ಸಮುದಾಯವನ್ನು ದುಶ್ಚಟಗಳಿಂದ ದೂರವಿಡಲು ಹಾಗೂ ಪರಿಸರ ಸಂರಕ್ಷಣೆಗಾಗಿ ಸೈಕಲ್ ಬಳಸಿ ಎಂಬ ಧ್ಯೇಯೋದ್ದೇಶದೊಂದಿಗೆ ನಗರದ ಕೆ ಎಚ್ ಪಾಟೀಲ್ ಜಿಲ್ಲಾ ಕ್ರೀಡಾಂಗಣದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಮುಳಗುಂದದ ಗಗನ್ ಫೌಂಡೇಶನ್ ಸಹಯೋಗದಲ್ಲಿ 'ಗೋ ಗ್ರೀನ್ ಸೈಕಲ್ ರೈಡ್' ಸೈಕ್ಲಿಂಗ್ ಜಾಥಾ ಹಮ್ಮಿಕೊಳ್ಳಲಾಗಿತ್ತು.



ಜಾಥಾಕ್ಕೆ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೃಷ್ಣಗೌಡ ಎಚ್ ಪಾಟೀಲ್ ಚಾಲನೆ ನೀಡಿ, ಸೈಕ್ಲಿಂಗ್ ಕ್ರೀಡೆ ಅಷ್ಟೇ ಅಲ್ಲ ಅದು ಮನುಷ್ಯರ ಆರೋಗ್ಯಕ್ಕೆ ಒಂದು ಒಳ್ಳೆಯ ವ್ಯಾಯಾಮ ಎಂದರು. ನಂತರ ಕೃಷ್ಣಗೌಡ ಎಚ್ ಪಾಟೀಲ್ ಸೈಕಲ್ ರೈಡ್ ಮಾಡೋ ಮೂಲಕ ಜಾಥಾದಲ್ಲಿ ಪಾಲ್ಗೊಂಡರು. ಜಾಥಾವು ಗದಗ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಜಾಗೃತಿ ಮೂಡಿಸಲಾಯಿತು. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಡಿವೈಎಸ್ಪಿ ತಮ್ಮರಾಯ ಪಾಟೀಲ್ ಹಾಗೂ ಬಡಾವಣೆ ಠಾಣೆಯ ಪಿಎಸ್ಐ ಉಮಾದೇವಿ ವಗ್ಗರ್ ಆಗಮಿಸಿದ್ದರು. ಈ ಸಂದರ್ಭದಲ್ಲಿ ಯುವಜನ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರಾದ ಶರಣು ಗೋಗೇರಿ, ಗಗನ್ ಫೌಂಡೇಶನ್‌ನ ನಿಂಗರೆಡ್ಡಿ ತೇರಿನಗಡ್ಡಿ, ಸೈಕ್ಲಿಂಗ್ ತರಬೇತುದಾರರ ಅನಂತ ದೇಸಾಯಿ ಸೇರಿದಂತೆ ಕ್ರೀಡಾ ಇಲಾಖೆಯ ಸಿಬ್ಬಂದಿಗಳು, ಸೈಕ್ಲಿಸ್ಟ್‌ಗಳು ಇದ್ದರು.

## ವಿದ್ಯಾರ್ಥಿ ಸಂಸತ್ತು ರಚನೆ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಲಕ್ಕುಂಡಿ ಗ್ರಾಮೀಣ ವಿದ್ಯಾವರ್ಧಕ ಸಂಸ್ಥೆಯ ಬಾಪೂಜಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ 2023-24ನೇ ಸಾಲಿನ ಶಾಲಾ ಯುವ ವಿದ್ಯಾರ್ಥಿ ಸಂಸತ್ತನ್ನು ಮತದಾನದ ಮೂಲಕ ರಚನೆ ಮಾಡಲಾಯಿತು.



ಶಾಲಾ ಪ್ರಧಾನಮಂತ್ರಿಯಾಗಿ ನಂದೀಶ ಕಲಬಂಡಿ, ಉಪ ಪ್ರಧಾನಿಯಾಗಿ ಶ್ರೇಯಾ ಗೌಡ್ರ ಆಯ್ಕೆಯಾದರು. ದೀಪಾ ಬಡಿಗೇರ ಶಿಕ್ಷಣ ಮಂತ್ರಿಯಾಗಿ, ರೇವತಿ ಹೊಸಮನಿ ಹಣಕಾಸು, ಗಂಗಮ್ಮ ಮುನವಳ್ಳಿಮಠ ಆರೋಗ್ಯ, ಅನಿಲ ಬಾರಕೇರ ಆಹಾರ, ಸಂತೋಷ ಹೊಸಮನಿ ಕ್ರೀಡಾ, ಲಕ್ಷ್ಮೀ ಸೋಮನಕಟ್ಟಿ ರಕ್ಷಣಾ, ಸಹನಾ ಜೀವಣ್ಣವರ ನೀರಾವರಿ, ಅಮೃತಾ ನರಗುಂದಮಠ ವಾರ್ತಾ, ನೇತ್ರಾ ಬೆಟಗೇರಿ ಸ್ವಚ್ಛತಾ, ದಿವ್ಯಾ ಕುಲಕರ್ಣಿ ಕಾನೂನು ಮಂತ್ರಿಯಾಗಿ, ಅಭಿಷೇಕ ಗಡಗಿ ಗ್ರಂಥಾಲಯ, ರೆಹಮಾನಸಾಬ ನದಾಫ ತೋಟಗಾರಿಕೆ, ಮಿಸಬಾ ಬೆಪಾರಿ ಅಭಿವೃದ್ಧಿ, ವಿನಾಯಕ ಬಿನ್ನಾಳ ವಿರೋಧ ಪಕ್ಷದ ನಾಯಕನಾಗಿ ಆಯ್ಕೆಯಾಗಿದ್ದಾರೆ.

ಆಯ್ಕೆಯಾದ ಎಲ್ಲಾ ಯುವ ವಿದ್ಯಾರ್ಥಿ ಪ್ರತಿನಿಧಿಗಳಿಗೆ ಹಿರಿಯ ಶಿಕ್ಷಕ ಬಸವರಾಜ ಆರ್ ಗರ್ಜಪ್ಪನವರ ಮಕ್ಕಳ ಸಂವಿಧಾನದ ಕುರಿತು ವಿವರಿಸಿದರು. ಶಿಕ್ಷಕಿ ರಫಿಯಾ ದಂಡಿನ ಪ್ರಮಾಣವಚನ ಬೋಧಿಸಿದರು. ಈ ಸಂದರ್ಭದಲ್ಲಿ ಆರ್ ಬಿ ಬರಡ್ವಾಡ, ಸಂಗೀತ ತಡಹಾಳ, ಎ ಎಂ ದಂಡಿನ, ಎಫ್ ಬಿ ಬರಡ್ವಾಡ, ರುದ್ರಮ್ಮ ಹಿರೇಮಠ ಉಪಸ್ಥಿತರಿದ್ದರು.

## ಕನ್ನಡ ಸಾಹಿತ್ಯ ಭವನ ನಿರ್ಮಾಣಕ್ಕೆ ಪ್ರಯತ್ನಿಸಿ

■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಜ.ಡಾ.ಅನ್ನದಾನೀಶ್ವರ ಸ್ವಾಮಿಗಳು ಮತ್ತು ಪಟ್ಟಣದ ಸಾಹಿತ್ಯಾಸಕ್ತರ ಆಶಯದಂತೆ ಕನ್ನಡ ಸಾಹಿತ್ಯ ಭವನ ನಿರ್ಮಾಣ ಕಾರ್ಯಪೂರ್ಣಗೊಳಿಸಲು ಎಲ್ಲರೂ ಪ್ರಯತ್ನ ಮಾಡಬೇಕು ಮುಂಡರಗಿ ತಾಲೂಕಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಪ್ರೊ. ಎಂ.ಜಿ. ಗಚ್ಚಣ್ಣವರ ಹೇಳಿದರು.



ಅವರು, ಭಾನುವಾರ ಜರುಗಿದ ಮುಂಡರಗಿ ತಾಲೂಕಾ ಕನ್ನಡ ಸಾಹಿತ್ಯ ಪರಿಷತ್ತಿನ ಕಾರ್ಯಕಾರಿಣಿ ಮಂಡಳಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕಸಾಪ ಸದಸ್ಯರ ಅಭಿಪ್ರಾಯ ಮತ್ತು ಸಾಹಿತ್ಯಾಸಕ್ತರ ವಿಶ್ವಾಸದೊಂದಿಗೆ ನಿರಂತರ ಸಾಹಿತ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುವದು. ಈಗಾಗಲೇ ಹಲವಾರು ಕಾರ್ಯಕ್ರಮಗಳು ಜರುಗಿವೆ ಎಂದರು. ಇದೇ ಸಂದರ್ಭದಲ್ಲಿ ವೀಣಾ ಪಾಟೀಲ ಅವರು ವಚನಗಳ ಸಂಗ್ರಹಕಾರ ಫ.ಗು.ಹಳಕಟ್ಟಿ ಅವರ ಸ್ಮರಣೆಗಾಗಿ ವಿದ್ಯಾರ್ಥಿಗಳಿಗೆ ವಚನ ಸ್ಪರ್ಧೆ ಹಾಗೂ ಅವರ ಕುರಿತು ಉಪನ್ಯಾಸ ಏರ್ಪಡಿಸಬೇಕು ಎಂದು ಸಲಹೆ ನೀಡಿದರು. ನಿಕಟಪೂರ್ವ ಕಸಾಪ ಅಧ್ಯಕ್ಷ ಎಸ್.ಬಿ.ಹಿರೇಮಠ ಮಾತನಾಡಿ, ಕನ್ನಡ ಸಾಹಿತ್ಯ ಪರಿಷತ್ತು ತನ್ನದೆ ಆದ ಘನತೆ ಹೊಂದಿದೆ ಇದು ಕರ್ನಾಟಕದ ಜನತೆಯನ್ನು ಪ್ರತಿನಿಧಿಸುವ ಸಾಹಿತ್ಯ ಸಾಂಸ್ಕೃತಿಕ ಬಿಂಬಿಸುವ ಸಂಸ್ಥೆಯಾಗಿದ್ದು, ಅದರ ಚೌಕಟ್ಟಿನಲ್ಲಿ ಅಧ್ಯಕ್ಷರು ಸೇರಿದಂತೆ ಕಾರ್ಯಕಾರಿಣಿ ಮಂಡಳಿ ಕಾರ್ಯನಿರ್ವಹಿಸುತ್ತಿದ್ದಾರೆ, ಹೀಗಾಗಿ ಕಸಾಪ ದತ್ತಿ ಉಪನ್ಯಾಸ, ಗ್ರಾಮಕ್ಕೆ ಒಂದು ಸಾಹಿತ್ಯಗೋಷ್ಠಿ, ಕವಿಗೋಷ್ಠಿ, ತಾಲೂಕಿನ ಸ್ವಾತಂತ್ರ್ಯಯೋಧರ ಹೋರಾಟದ ಬಗ್ಗೆ ಪುಸ್ತಕ ಪ್ರಕಟಣೆ ಸೇರಿದಂತೆ ಅನೇಕ ಕಾರ್ಯಕ್ರಮಗಳು ಅಧ್ಯಕ್ಷರ ಮಾರ್ಗದರ್ಶನದಲ್ಲಿ ನಡೆಯುವಂತಾಗಲಿ ಎಂದರು.

ಪ್ರಾ.ಡಿ.ಸಿ.ಮಠ, ಕವಿ ಶಂಕರ ಕುಕನೂರ, ಸಿ.ಕೆ.ಗಣಪ್ಪನವರ ಸೇರಿದಂತೆ ಇತರರು ಸಾಹಿತ್ಯ ಚಟುವಟಿಕೆಗಳ ಕುರಿತು ಹಲವು ವಿಷಯಗಳ ಬಗ್ಗೆ ಸಲಹೆ ನೀಡಿದರು.

ಮಂಜುನಾಥ ಮುಧೋಳ, ಕೃಷ್ಣ ಸಾಹುಕಾರ, ಶಿವಪುತ್ರಪ್ಪ ಇಟಗಿ, ಅಕ್ಕಮಹಾದೇವಿ ಕೊಟ್ಟೂರಶೆಟ್ಟರ, ಮಂಜುಳಾ ಇಟಗಿ, ರಮೇಶ ಪಾಟೀಲ, ಆನಂದ ರಾಮೇನಹಳ್ಳಿ, ಸುರೇಶ್ ಭಾವಿಹಳ್ಳಿ ಹಾಗೂ ಡಾ.ಆರ್.ಎಚ್.ಜಂಗಣವಾರಿ ಉಪಸ್ಥಿತರಿದ್ದರು.

## ಸಿರಿ ಧಾನ್ಯಗಳ ಆಹಾರ ತಯಾರಿಕಾ ಸ್ಪರ್ಧೆ

■ವಿಜಯಸಾಕ್ಷಿ ಸುದ್ದಿ, ಗದಗ

ನೆಹರು ಯುವ ಕೇಂದ್ರ ಗದಗ ಮತ್ತು ಕೆಎಲ್‌ಇ ಸಂಸ್ಥೆಯ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯ, ಯೂತ್ಸ್ ಫಾರ್ ಚೇಂಜ್ ಆರ್ಗನೈಸೇಷನ್ ಸಂಯುಕ್ತಾಶ್ರಯದಲ್ಲಿ ಸಿರಿ ಧಾನ್ಯಗಳ ಆಹಾರ ತಯಾರಿಕಾ ಸ್ಪರ್ಧೆಯನ್ನು ಆಯೋಜಿಸಲಾಗಿತ್ತು.



ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ನೆಹರು ಯುವ ಕೇಂದ್ರದ ಜಿಲ್ಲಾ ಯುವ ಸಮನ್ವಯಾಧಿಕಾರಿ ಎನ್ ರಂಜನಿ ಮಾತನಾಡಿ, ಪ್ರಸಕ್ತ ವರ್ಷವನ್ನು ಅಂತಾರಾಷ್ಟ್ರೀಯ ಸಿರಿ ಧಾನ್ಯಗಳ ವರ್ಷವೆಂದು ಆಚರಿಸಲಾಗುತ್ತಿದ್ದು, ಸಿರಿ ಧಾನ್ಯಗಳ ಬಗ್ಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ಈ ಸ್ಪರ್ಧೆಯನ್ನು ಆಯೋಜಿಸಲಾಗಿದೆ ಎಂದರು. ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಪ್ರೊ. ಎಂ.ಬಿ ಕೊಳವಿಯವರು ಮಾತನಾಡಿ, ಯುವ ಜನತೆ ಆಹಾರದಲ್ಲಿ ಸಿರಿ ಧಾನ್ಯಗಳನ್ನು ಹೆಚ್ಚಾಗಿ ಬಳಸಬೇಕೆಂದು ತಿಳಿಸಿದರು. ಸ್ಪರ್ಧೆಯಲ್ಲಿ ಪ್ರಥಮ ಬಹುಮಾನವನ್ನು ಜೆ ಟಿ ಕಾಲೇಜಿನ ಅಶ್ವಿನಿ ಸೊರಟುರು, ದ್ವಿತೀಯ ಸ್ಥಾನವನ್ನು ಡಿಜಿಎಮ್ ಕಾಲೇಜಿನ ಸೌರಭ್ ಹಿರೇಮಠ, ತೃತೀಯ ಸ್ಥಾನವನ್ನು ಕೆಎಲ್‌ಇ ಕಾಲೇಜಿನ ಲಕ್ಷ್ಮೀ ಕಲಕೇರಿ ಪಡೆದುಕೊಂಡರು.

ಸ್ಪರ್ಧೆಯಲ್ಲಿ ಡಾ.ಕಾಮಲಾಕ್ಷಿ ಅಂಗಡಿ, ವಿಜಯಲಕ್ಷ್ಮೀ ಮೆಣಸಿನಕಾಯಿ, ಸುಧಾ ಕುಂಬಾರ ತೀರ್ಪು ನೀಡಿದರು. ವೀಣಾ ತಿರಲಾಪುರ್ ಕಾರ್ಯಕ್ರಮ ನಿರೂಪಿಸಿದರು. ಪ್ರೊ.ವಿಠ್ಠಲ ಕೊಳ್ಳಿಯವರ್, ಡಾ.ವೀಣಾ, ರವಿಕುಮಾರ್ ಹೊಂಬಾಳಿ, ಲಲಿತಾ ಗೌಳಿ ಮುಂತಾದವರಿದ್ದರು.

ಲಿಂ.ಬಿ.ಜಿ.ಅಣ್ಣಿಗೇರಿ ಜಯಂತಿ, ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ತೋಂಟದ ಶ್ರೀಗಳು

# ಎಲ್ಲ ದಾನಕ್ಕಿಂತ ವಿದ್ಯಾದಾನ ಶ್ರೇಷ್ಠವಾದದ್ದು



■ವಿಜಯಸಾಕ್ಷಿ ಸುದ್ದಿ, ಗದಗ

ಎಲ್ಲ ದಾನಕ್ಕಿಂತ ವಿದ್ಯಾದಾನ ಅತ್ಯಂತ ಶ್ರೇಷ್ಠವಾದ ದಾನವಾಗಿದೆ ಎಂದು ಗದಗ ತೋಂಟದಾರ್ಯ ಮಠದ ಜ.ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಅಭಿಪ್ರಾಯಪಟ್ಟರು.

ಅವರು ರವಿವಾರ ನಗರದ ತೋಂಟದಾರ್ಯ ಮಠದ ಅನುಭವ ಮಂಟಪದಲ್ಲಿ ಬಿ.ಜಿ.ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನ ಏರ್ಪಡಿಸಿದ್ದ ಲಿಂ.ಬಿ.ಜಿ.ಅಣ್ಣಿಗೇರಿ ಅವರ 93ನೇ ಜಯಂತಿ ಹಾಗೂ 9ನೇ ವರ್ಷದ ಪ್ರತಿಭಾ ಪುರಸ್ಕಾರ ಸಮಾರಂಭದ ಸಾನಿಧ್ಯ ವಹಿಸಿ ಮಾತನಾಡಿದರು.

ಭೂದಾನ, ಅನ್ನದಾನ, ದೇಹದಾನ, ನೇತ್ರದಾನ ಹೀಗೆ ಹಲವಾರು ದಾನಗಳಲ್ಲಿ ಅಕ್ಷರ ಜ್ಞಾನ ಅರ್ಥಾತ್ ಶಿಕ್ಷಣ ದಾನ ಉತ್ಕೃಷ್ಟ ದಾನವಾಗಿದೆ. ಉಳಿದೆಲ್ಲ ದಾನಕ್ಕಿಂತ ಪಡೆದ ಶಿಕ್ಷಣವು ಜೀವನ ಪರ್ಯಂತ ಮನುಷ್ಯನೊಂದಿಗೆ ಬರುವದು. ಅಳಿಯದ ಕಳ್ಳತನವಾಗದ ಶಾಸ್ವತ ಜ್ಞಾನಭಂಡಾರವಾಗಿದೆ. ಈ ಶಿಕ್ಷಣದಿಂದಲೇ ವ್ಯಕ್ತಿಯ ಬದುಕು ರೂಪಿತಗೊಳ್ಳುವದು ಎಂದರು.

ಗದಗ ಪರಿಸರದಲ್ಲಿ ಶಿಕ್ಷಣ ಪ್ರೇಮಿ, ತ್ಯಾಗಜೀವಿ ಲಿಂ. ಬಿ.ಜಿ.ಅಣ್ಣಿಗೇರಿ ಗುರುಗಳು ಸಲ್ಲಿಸಿದ ಸೇವೆ ಅನುಪಮವಾದದ್ದು. ಶಿಕ್ಷಕರಾಗಿ, ಮುಖ್ಯೋಪಾಧ್ಯಾಯರಾಗಿ ಸೇವೆ ಸಲ್ಲಿಸಿದ ಅವರು ಸನ್ಯಾಸ ಜೀವನ ನಡೆಸಿದ ಅವರು ಶಿಕ್ಷಕ ವೃತ್ತಿಯ ಕರ್ತವ್ಯದ ಉಳಿದ ಸಮಯದಲ್ಲೇ ತಾವಿದ್ದ ಕೊಠಡಿಯಲ್ಲಿ ವಿದ್ಯಾರ್ಥಿಗಳಿಗೆ ಪಾಠ ಹೇಳಿ ಬದುಕು ನಡೆಸಿದವರು. ಕೊಠಡಿಯಿಂದ ಆರಂಭಗೊಂಡ ಈ ಪಾಠ ಹೇಳುವಿಕೆ ಕಾಲಕ್ರಮೇಣ ಗುರುಕುಲವಾಗಿ ಪರಿವರ್ತನೆಗೊಂಡಿತು. ಅಪಾರ ಶಿಷ್ಯರು ದೇಶ, ವಿದೇಶ, ರಾಜ್ಯದಲ್ಲಿ ಉನ್ನತ ಸ್ಥಾನದಲ್ಲಿರುವದು ಅಣ್ಣಿಗೇರಿ ಅವರ ಬೋಧನೆಯ ಗಟ್ಟಿತನ, ಮಕ್ಕಳ ಭವಿಷ್ಯ ರೂಪಿಸುವ ಕಳಕಳಿಯನ್ನು ಅಭಿವ್ಯಕ್ತಗೊಳಿಸುವದು ಎಂದರು.

ಅವರ ತರುವಾಯ ಗುರುಕುಲ ಆಶ್ರಮವನ್ನು ಪ್ರತಿಷ್ಠಾನವು ಸಾಕಷ್ಟು ಸುಧಾರಣೆ ತಂದಿದೆ. ಅವರ ಶಿಷ್ಯ ಬಳಗ ಶಿಕ್ಷಕ, ಉಪನ್ಯಾಸಕ ವೃತ್ತಿಯಲ್ಲಿದ್ದು ಗುರುಕುಲದಲ್ಲಿ ಮಕ್ಕಳಿಗೆ ಉಚಿತ ಪಾಠ ಬೋಧಿಸುವ ಮೂಲಕ ಗುರುಗಳು ಮಾಡುತ್ತಿದ್ದ ಸೇವೆಯನ್ನು ಮುಂದುವರೆಸಿರುವದು ಅಭಿನಂದನೀಯ ಎಂದು ಸ್ವಾಮೀಜಿ ಹೇಳಿದರು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಡಿಡಿಪಿಐ ಜಿ.ಎಂ.ಬಸವಲಿಂಗಪ್ಪ ಮಾತನಾಡಿ, ಪ್ರತಿಷ್ಠಾನವು ಉತ್ತಮ ಕಾರ್ಯ ಮಾಡುತ್ತಿದೆ. ಗದಗ ತಾಲೂಕಿನ ಎಲ್ಲ ಸರಕಾರಿ ಪ್ರೌಢ ಶಾಲೆಯ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಅವರನ್ನು ಪ್ರೋತ್ಸಾಹಿಸಿರುವದು ಶ್ಲ್ಯಾಘನೀಯ. ಈ ಪರಂಪರೆ ಹೀಗೆ ಮುಂದುವರೆಯಲಿ ಎಂದರು. ಇನ್ನೋರ್ವ ಅತಿಥಿ ಪ್ರೊ.ಎಸ್. ಯು.ಸಜ್ಜನಶೆಟ್ಟರ ಬಿ.ಜಿ.ಅಣ್ಣಿಗೇರಿ ಅವರ ವ್ಯಕ್ತಿತ್ವ, ಶಿಕ್ಷಣ ಕ್ಷೇತ್ರಕ್ಕೆ ಸಲ್ಲಿಸಿದ ಅನುಪಮ ಕೊಡುಗೆಯನ್ನು ಬಣ್ಣಿಸಿದರು.

ಅಧ್ಯಕ್ಷತೆ ವಹಿಸಿದ್ದ ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಪಾಟೀಲ ಮಾತನಾಡಿ, ಅಣ್ಣಿಗೇರಿ ಗುರುಗಳ ಶಿಷ್ಯರು ಸಂಘಟಿತರಾಗಿ ತೋಂಟದ ಶ್ರೀಗಳ ಮಾರ್ಗದರ್ಶನದಲ್ಲಿ ಪ್ರತಿಭಾ ಪ್ರತಿಷ್ಠಾನವನ್ನು ಮುನ್ನಡೆಸಿದ್ದು ಗುರುಗಳ ಕನಸ್ಸನ್ನು ಸಾಕಾರಗೊಳಿಸಲು ಯತ್ನಿಸುವದಾಗಿ ಹೇಳಿ ಸರ್ವರ ಸಹಕಾರ ಕೋರಿದರು.

ಪ್ರತಿಭಾನ್ವಿತ ವಿದ್ಯಾರ್ಥಿ ವಿದ್ಯಾರ್ಥಿನಿಯರಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು. ಹಲವು ಮಹನೀಯರನ್ನು ಇದೇ ಸಂದರ್ಭದಲ್ಲಿ ಗೌರವಿಸಲಾಯಿತು.

ಪರಶುರಾಮ ಮಂಗಳಗುಡ್ಡ, ವಿಠ್ಠಲ ಹೂಗಾರ ಹಾಗೂ ವಿದ್ಯಾರ್ಥಿ ತಂಡದಿಂದ ಪ್ರಾರ್ಥನೆ ಜರುಗಿತು. ಮಾಜಿ ಶಾಸಕ ಡಿ.ಆರ್.ಪಾಟೀಲ ಅಣ್ಣಿಗೇರಿ ಗುರುಗಳ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಗೌರವಿಸಿದರು. ಎಂ.ಪಿ.ಕೋಳಿವಾಡ ಸ್ವಾಗತಿಸಿದರು. ಪ್ರತಿಷ್ಠಾನದ ಉಪಾಧ್ಯಕ್ಷ ಶಂಕ್ರಪ್ಪ ಅಣ್ಣಿಗೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಳಕಪ್ಪ ಕುರ್ತಕೋಟಿ ನಿರೂಪಿಸಿದರು. ಶಿವಾನಂದ ಕತ್ತಿ ವಂದಿಸಿದರು.

ಪ್ರತಿಷ್ಠಾನದ ರವಿ ದಂಡಿನ, ಎಸ್.ಆರ್.ಪಾಟೀಲ, ವಿರುಪಾಕ್ಷಪ್ಪ ಮ್ಯಾಗೇರಿ, ಚನ್ನಪ್ಪ ಮಲ್ಲಾಡದ, ಶಿವಾನಂದ ದಂಡಿನ, ತೋಂಟೇಶ ವೀರಲಿಂಗಯ್ಯನಮಠ, ವಿರುಪಾಕ್ಷಪ್ಪ ಶಾಂತಗೇರಿ, ಬಸವರಾಜ ಬಿಂಗಿ, ಸಿದ್ದಣ್ಣ ಕವಲೂರ, ಡಾ.ಬಸವರಾಜ ಚನ್ನಪ್ಪಗೌಡ್ರ, ಶಶಿಧರ ದಿಂಡೂರ ಸೇರಿದಂತೆ ಶಿಷ್ಯ ಬಳಗ, ಶಿಕ್ಷಣ ಪ್ರೇಮಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## ಪಠ್ಯೇತರ ಚಟುವಟಿಕೆಯಲ್ಲಿಯೂ ಭಾಗವಹಿಸಿ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ವಿದ್ಯಾರ್ಥಿಗಳು ಪಠ್ಯದೊಂದಿಗೆ ಪಠ್ಯೇತರ ಚಟುವಟಿಕೆಲ್ಲಿಯೂ ಬಾಗವಹಿಸಬೇಕು. ಇಂದಿನ ಆಧುನಿಕ ತಂತ್ರಜ್ಞಾನದ ಯುಗದಲ್ಲಿ ಮಕ್ಕಳು ಕೇವಲ ಪಠ್ಯಕ್ಕೆ ಹೆಚ್ಚು ಮಹತ್ವ ನೀಡದೇ, ಪಠ್ಯೇತರ ಚಟುವಟಿಕೆಯಲ್ಲಿಯೂ ಭಾಗವಹಿಸುವದರಿಂದ ದೈಹಿಕ ಹಾಗೂ ಮಾನಸಿಕವಾಗಿ ಸದೃಢರಾಗುತ್ತಾರೆ. ಇದರಿಂದ ಎಲ್ಲಾ ಕ್ಷೇತ್ರಗಳಲ್ಲಿಯೂ ಸಾಧನೆ ಮಾಡಲು ಸಹಕಾರಿಯಾಗುತ್ತದೆ ಎಂದು ಶಿಗ್ಗಾಂವ ಎಸ್‌ಆರ್‌ಜೆವಿ ಮಾಹಾವಿದ್ಯಾಲಯದ ಪ್ರಾಚಾರ್ಯ ಡಾ. ಬಾಲಚಂದ್ರ ತೊಂಡಿಹಾಳ ಹೇಳಿದರು.



ಅವರು ಪಟ್ಟಣದ ಎಸ್‌ಜೆಜೆಎಂ ಪದವಿಪೂರ್ವ ಮಾಹಾವಿದ್ಯಾಲಯದಲ್ಲಿ ಪಠ್ಯೇತರ ಚಟುವಟಿಕೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಾಶಿಸ ಅಧ್ಯಕ್ಷ ಎಂ ಡಿ ಬಟ್ಟೂರ ವಹಿಸಿದ್ದರು. ಡಾ. ಎಸ್ ಸಿ ಚವಡಿ, ಎಂ ಎಂ ಅದರಗುಂಚಿ, ಎಸ್ ಸಿ ಕುರ್ತಕೋಟಿ, ಎಫ್ ಎಸ್ ಅಮೋಘಿಮಠ, ಶಿವಲೀಲಾ ಬಳಿಗೇರ, ಲಕ್ಷ್ಮೀ ಹಡಪದ, ಕಾಲೇಜು ಪ್ರಾಚಾರ್ಯ ಎ ಎಂ ಅಂಗಡಿ ಹಾಗೂ ಮಾಹಾವಿದ್ಯಾಲಯದ ಉಪನ್ಯಾಸಕ ವೃಂದದವರಿದ್ದರು.

ನೀವೂ ನಮ್ಮ ಜೊತೆ ಕೈಜೋಡಿಸಿ
'ವಿಜಯಸಾಕ್ಷಿ'
ನಿಮ್ಮ ಮನೆಯ, ಮನದ ಪತ್ರಿಕೆ ಆಗಲೆಂದು ನಾವು ಬಯಸುತ್ತೇವೆ. ಇಲ್ಲಿ ನಿಮ್ಮ ಅಭಿಪ್ರಾಯ ಹಂಚಿಕೊಳ್ಳಲು ಮುಕ್ತ ಸ್ವಾಗತವಿದೆ.
ನೀವು ಪತ್ರಿಕೆಯ ಕುರಿತು ತಮ್ಮ ಸಲಹೆ, ಮೆಚ್ಚುಗೆ ನಮಗೆ ಬರೆದು ಕಳಿಸಿ..
ಲೇಖನ, ಸಣ್ಣ ಕತೆ, ಕವನ, ಪ್ರಬಂಧ, ಪ್ರವಾಸ ಅನುಭವ ಈ ಕುರಿತು ನೀವೂ ಬರೆಯಬಹುದು.
E-mail: vijayasakshidaily@gmail.com
ಮೊ : 9019256545

# ಪ್ರಶ್ನೆ ಕೇಳುವ ಮನೋಭಾವ ರೂಢಿಸಿಕೊಳ್ಳಿ

▶▶ ಮೊದಲನೇ ಪುಟದಿಂದ

ರೈತರಿಗೆ ಮತ್ತು ಕುರಿಗಾಯಿಗಳಿಗೆ ಮಳೆ ಬರುವ ಸಂದೇಶದ ಬಗ್ಗೆ ಸಂಶೋಧನೆ ಮಾಡಿ ಪ್ರಥಮ ಸ್ಥಾನ ಪಡೆದು 10000 ಸಾವಿರ ರೂ, ನಗದು ಬಹುಮಾನ ತನ್ನದಾಗಿಸಿಕೊಂಡನು. ಈ ವಿದ್ಯಾರ್ಥಿ ಮಾಡಿದ ವಿಜ್ಞಾನ ಮಾದರಿಯನ್ನು ರಾಷ್ಟ್ರಮಟ್ಟಕ್ಕೆ ಪರಿಚಯಿಸುವುದಾಗಿ ಸಂಸ್ಥೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ದಿನೇಶ ಬಡಗಂಡಿ ಹೇಳಿದರು.

ಸಾರೆ ತಾರೆ ಜಮೀನ ಪರ ಟ್ರಸ್ಟ್ ಅಧ್ಯಕ್ಷರಾದ ಪ್ರಭುರಾಜ ಅಪರಂಜಿ, ಟ್ರಸ್ಟನ ಮಾಜಿ ಕಾರ್ಯದರ್ಶಿ ಎ.ಸಿ,ಗೋಪಾಲ, ಸಾರೆ ತಾರೆ ಜಮೀನ ಪರ ಟ್ರಸ್ಟ್ ನ ಟ್ರಸ್ಟಿ ಅಜಿತ ಚೌಧರಿ, ಸರ್ಕಾರಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರು ಪಾರ್ವತಿ ಬಸವರಾಜ ವಸ್ತ್ರದ, ಸಿದ್ಧಲಿಂಗನಗರದ ಶ್ರೀ ಬಸವೇಶ್ವರ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾದ ಕೆ.ವಿ.ಕೊರಡ್ಡಿ, ಸಂಸ್ಥೆಯ ವಿಜ್ಞಾನಿಗಳಾದ ವಿಜಯಕುಮಾರ್, ಶಾಲೆಯ ಸಿಬ್ಬಂದಿಗಳು, ವಿದ್ಯಾರ್ಥಿ ವಿದ್ಯಾರ್ಥಿನಿಯರು ಹಾಜರಿದ್ದರು.

### ಸಾವಿರಾರು ಅರ್ಹ ಫಲಾನುಭವಿಗಳು ವಸತಿ ಯೋಜನೆಯಿಂದ ವಂಚಿತ: ಅನಿಲ್ ಮೆಣಸಿನಕಾಯಿ ಅಸಮಾಧಾನ

# ಅರ್ಹ ಫಲಾನುಭವಿಗಳಿಗೆ ಮನೆಗಳನ್ನು ಒದಗಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಗಂಗಿಮಡಿಯಲ್ಲಿ ರಾಜೀವ್ ಗಾಂಧಿ ವಸತಿ ನಿಗಮದಿಂದ ನಿರ್ಮಿಸಲಾಗುತ್ತಿರುವ ವಸತಿ ಯೋಜನೆಯ ಫಲಾನುಭವಿಗಳು ತಮ್ಮ ಪಾಲಿನ ವಂತಿಗೆ ಪಾವತಿಸಿ, ಬ್ಯಾಂಕ್ ಸಾಲ ಪಡೆಯಲು ಒಪ್ಪಿಗೆ ಪತ್ರ ಕೊಟ್ಟು ಸಾಲ ಮಂಜೂರಾತಿ ಬಳಿಕವೇ ಮನೆ ಮಂಜೂರು ಮಾಡಲಾಗುವುದು ಎಂಬ ಸಚಿವರ ನಿರ್ಧಾರ 'ಭೂತದ ಬಾಯಲ್ಲಿ ಭಗವದ್ಗೀತೆ' ಎಂಬಂತಿದೆ ಎಂದು ಬಿಜೆಪಿ ಯುವ ನಾಯಕ ಅನಿಲ್ ಮೆಣಸಿನಕಾಯಿ ವ್ಯಂಗ್ಯವಾಡಿದ್ದಾರೆ.



ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಕಳೆದ ವಿಧಾನಸಭಾ ಚುನಾವಣೆ ಪೂರ್ವದಲ್ಲಿ ಮತದಾರರನ್ನು ಸೆಳೆಯುವ ಸಲುವಾಗಿ ಗದಗ–ಬೆಟಗೇರಿ ನಗರಸಭೆಗೆ ಮನೆಗಳನ್ನು ಹಸ್ತಾಂತರಿಸಿಕೊಳ್ಳದಿದ್ದರೂ ಸಚಿವರು ವಸತಿ ನಿಗಮದ ನೀತಿ–ರಿವಾಜುಗಳನ್ನು ಗಾಳಿಗೆ ತೂರಿ, ಏಕಪಕ್ಷೀಯವಾಗಿ ಮನೆ ಹಂಚಿಕೆ ಮಾಡಿ, ಫಲಾನುಭವಿಗಳಿಗೆ ಮನೆಗಳ ಕೀ ಹಂಸ್ತಾತರಿಸಿದಾಗ ಈ ಬುದ್ಧಿ ಎಲ್ಲಿ ಹೋಗಿತ್ತು ಎಂದು ಪ್ರಶ್ನಿಸಿದ್ದಾರೆ.

ರಾಜ್ಯ ಹಾಗೂ ಕೇಂದ್ರ ಸರ್ಕಾರ 3630 ಗುಂಪು ಮನೆಗಳ ನಿರ್ಮಾಣಕ್ಕೆ ನೀಡಿರುವ ಅಂದಾಜು 243.98 ಕೋಟಿ ರೂ ಸಹಾಯಧನವನ್ನು 252 ಮನೆಗಳಿಗೆ ಈಗಾಗಲೇ ವ್ಯಯಿಸಲಾಗಿದೆ. ಅನುದಾನದ ಕೊರತೆಯಿಂದಾಗಿ ಗುಂಪು ಮನೆಗಳ ನಿರ್ಮಾಣ ಕಾರ್ಯವೂ ವರ್ಷಗಳಿಂದ ನೆನೆಗುದಿಗೆ ಬಿದ್ದಿದೆ. ಇದರಿಂದ ಅವಳಿ ನಗರದ ಸಾವಿರಾರು ಅರ್ಹ ಫಲಾನುಭವಿಗಳು ವಸತಿ ಯೋಜನೆಯಿಂದ ವಂಚಿತರಾಗಿದ್ದಾರೆ. ಇದಕ್ಕೆ ಜವಾಬ್ದಾರರು ಯಾರು?

ವಸತಿ ಸಚಿವರಾದ ಜಮೀರ್ ಅಹ್ಮದ್ ಅವರದೊಂದಿಗೆ ಸಭೆ ನಡೆಸಿ ನೀವೇ ನಿರ್ಧಾರ ಕೈಗೊಂಡಿರುವಂತೆ ನಿಯಮಗಳನ್ನು ಧಿಕ್ಕರಿಸಿ ಈಗಾಗಲೇ ವಸತಿ ಯೋಜನೆಯ ಲಾಭ ಪಡೆದಿರುವ ಫಲಾನುಭವಿಗಳಿಂದ ವಂತಿಗೆ ಹಣ ಪಾವತಿಸಿ ಬ್ಯಾಂಕ್ ಸಾಲಕ್ಕೆ ಒಪ್ಪಿಗೆ ನೀಡದಿರುವ ಫಲಾನುಭವಿಗಳನ್ನು ಕೈಬಿಡುವಿರಾ? ಎಂಬುವುದನ್ನು ಆತ್ಮಾವಲೋಕನ ಮಾಡಿಕೊಳ್ಳುವುದು ಸೂಕ್ತ.

> ಅಂದಾಜು 7.83 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಿರುವ ಮನೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರ ಎಸ್‌ಸಿ/ಎಸ್‌ಟಿ ವರ್ಗದ ಪ್ರತಿ ಫಲಾನುಭವಿಗೆ 3.30 ಲಕ್ಷ ರೂ. ಹಾಗೂ ಸಾಮಾನ್ಯ ವರ್ಗದ ಪ್ರತಿ ಫಲಾನುಭವಿಗೆ 2.70 ಲಕ್ಷ ಸಹಾಯಧನವನ್ನು ಒದಗಿಸಿವೆ. ಇನ್ನುಳಿದ ನಿರ್ಮಾಣದ ಬಾಕಿ ವೆಚ್ಚವನ್ನು ಫಲಾನುಭವಿಗಳು ವಂತಿಗೆ ರೂಪದಲ್ಲಿ ಸ್ವಂತ ಅಥವಾ ಬ್ಯಾಂಕ್ ಲೋನ್ ಮೂಲಕ ಭರಿಸಬೇಕೆಂಬ ಷರುತ್ತು ಇದೆ. ಇವೆಲ್ಲಾ ನಿಯಮಗಳನ್ನು ಉಲ್ಲಂಘಿಸಿ ಮನೆ ಹಂಚಿಕೆ ಮಾಡಿ ವರ್ಷಗಳಾಗುತ್ತಿವೆ. ಇದಕ್ಕೆ ನಗರ ಆಶ್ರಯ ಸಮಿತಿಯ ಅಧ್ಯಕ್ಷರೇ ಹೊಣೆಯಾಗುತ್ತಾರೆ.
>
> **– ಅನಿಲ್ ಮೆಣಸಿನಕಾಯಿ.**
> ಬಿಜೆಪಿ ಯುವ ಧುರೀಣರು.

ಅಲ್ಲದೇ, 2019ರಲ್ಲಿ ಸಚಿವರೇ ತಯಾರಿಸಿ ಈಗಾಗಲೇ ಮನೆಗಳ ಕೀ ವಿತರಿಸಲಾಗಿರುವ ವಸತಿ ಯೋಜನೆಯ ಫಲಾನುಭವಿಗಳ ಪಟ್ಟಿ ಸಮಂಜಸ ಮತ್ತು ವೈಜ್ಞಾನಿಕವಾಗಿರಲಿಲ್ಲ. ಅವಳಿ ನಗರದ 35 ವಾರ್ಡ್‌ಗಳಲ್ಲಿ ಕೇವಲ ನಾಲ್ಕೈದು ವಾರ್ಡ್‌ಗಳಲ್ಲಿನ ಫಲಾನುಭವಿಗಳಿಗೆ ಮಾತ್ರವೇ ಆದ್ಯತೆ ನೀಡಲಾಗಿದೆ. ಮೊದಲು ಈ ಬಗ್ಗೆ ಸೂಕ್ತ ನಿರ್ಧಾರ ಕೈಗೊಂಡು ಅರ್ಹ ಫಲಾನುಭವಿಗಳಿಗೆ ಮನೆಗಳನ್ನು ಒದಗಿಸಬೇಕು. ಜೊತೆಗೆ ಇನ್ನುಳಿದ ಮನೆಗಳ ನಿರ್ಮಾಣಕ್ಕೆ ಅಗತ್ಯ ಅನುದಾನ ಮಂಜೂರು ಮಾಡಬೇಕು ಎಂದು ಅನಿಲ್ ಮೆಣಸಿನಕಾಯಿ ಒತ್ತಾಯಿಸಿದ್ದಾರೆ.

# ಸೇವಾ ಕೇಂದ್ರಗಳೆದುರು 'ಗೃಹಲಕ್ಷ್ಮೀ'ಯರ ಸಾಲು

▶▶ ಮೊದಲನೇ ಪುಟದಿಂದ

ಆಧಾರ್ ಕಾರ್ಡ್ ತಿದ್ದುಪಡಿ ಮತ್ತು ಫೋನ್ ನಂಬರ್ ಲಿಂಕ್ ಮಾಡಿಸದಿರುವ ಫಲಾನುಭವಿಗಳು ಆಧಾರ್ ಕೇಂದ್ರಕ್ಕೆ ಅಲೆಯುತ್ತಿದ್ದಾರೆ. ಆದರೆ ಪಟ್ಟಣದಲ್ಲಿ ಆಧಾರ್ ಸೇವಾ ಕೇಂದ್ರಗಳ ಕೊರತೆಯಿಂದ ಜನರ ಪರದಾಟ ಮಾತ್ರ ತಪ್ಪುತ್ತಿಲ್ಲ.

ಪಟ್ಟಣದಲ್ಲಿ ಪುರಸಭೆ, ತಾಲೂಕು ಪಂಚಾಯಿತಿ ಮತ್ತು ಎಪಿಎಂಸಿ ಕಟ್ಟಡದಲ್ಲಿ ಉಚಿತವಾಗಿ ಅರ್ಜಿ ಸ್ವೀಕರಿಸಲಾಗುತ್ತಿದೆ. ಆದರೆ ಅಲ್ಲಿ ತಾಂತ್ರಿಕ ತೊಂದರೆ, ಸರ್ವರ್ ಸಮಸ್ಯೆ ಮುಂದುವರೆದಿದೆ. ಇನ್ನುಳಿದ 2 ಕರ್ನಾಟಕ ಒನ್ ಸೇವಾ ಕೇಂದ್ರದಲ್ಲಿ ಅರ್ಜಿಗಳ ಸ್ವೀಕೃತಿ ಕಾರ್ಯ ಸರಳವಾಗಿ ನಡೆಯುತ್ತಿದೆ. ಇಲ್ಲಿ ಉಚಿತವಾಗಿ ಅರ್ಜಿ ಹಾಕಲಾಗುತ್ತಿಲ್ಲ. ಆದ್ದರಿಂದ ಉಚಿತ ಅರ್ಜಿ ಸ್ವೀಕರಿಸುವ ಕೇಂದ್ರಗಳಲ್ಲಿನ ತಾಂತ್ರಿಕ ತೊಂದರೆ ಮತ್ತು ಸರ್ವರ್ ಸಮಸ್ಯೆಯನ್ನು ಸರಿಪಡಿಸಬೇಕು.

ಹೆಚ್ಚು ಜನ ಸೇರುವ ಸೇವಾ ಕೇಂದ್ರಗಳ ಮುಂದೆ ನೂಕುನುಗ್ಗಲು ತಪ್ಪಿಸಲು ಪೊಲೀಸ್ ಸಿಬ್ಬಂದಿಗಳನ್ನು ನಿಯೋಜಿಸಬೇಕು ಎಂದು ಪುರಸಭೆ ಸದಸ್ಯ ಮಹೇಶ ಹೊಗೆಸೊಪ್ಪಿನ ಆಗ್ರಹಿಸಿದ್ದಾರೆ.

# ಕಾನೂನು ಸುವ್ಯವಸ್ಥೆ ಕಾಪಾಡಲು ಸಿಸಿ ಟಿವಿ ಅಳವಡಿಸಿ

▶▶ ಮೊದಲನೇ ಪುಟದಿಂದ

ಅಳವಡಿಸುವುದರಿಂದ ಗ್ರಾಮಗಳು ಸೇರಿದಂತೆ ಸುತ್ತಮುತ್ತಲಿನ ಪ್ರದೇಶಗಳು ಸುರಕ್ಷಿತವಾಗಿರಲಿವೆ. ಇದಕ್ಕೆ ಆಯಾ ಗ್ರಾ ಪಂನಲ್ಲಿ ಅನುದಾನ ಲಭ್ಯವಿರುವುದರಿಂದ, ಸಾರ್ವಜನಿಕರ ಹಿತದೃಷ್ಟಿಯಿಂದ ಸಿಸಿ ಟಿವಿ ಅಳವಡಿಸಿದರೆ ಅಪರಾಧ ಪ್ರಕರಣಗಳನ್ನು ತಡೆಗಟ್ಟಬಹುದಾಗಿದೆ. ಸಾರ್ವಜನಿಕರೂ ಸಹ ಸುರಕ್ಷತೆಯ ದೃಷ್ಟಿಯಿಂದ ಮನೆಗೆ ಸಿಸಿ ಟಿವಿ ಅಳವಡಿಸಲು ಮುಂದಾಗಬೇಕು. ಸರಕಾರಿ ಕಚೇರಿಗಳು ಮತ್ತು ಸರಕಾರಿ ಜಾಗೆಗಳಲ್ಲೂ ಸಿಸಿ ಟಿವಿ ಅಳವಡಿಸುವಂತೆ ನೋಟೀಸ್ ನೀಡಲಾಗಿದೆ ಎಂದರು.

# ಸೊರಟೂರ ಗ್ರಾಮ ಪಂಚಾಯಿತಿ ನೂತನ ಅಧ್ಯಕ್ಷ-ಉಪಾಧ್ಯಕ್ಷರ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಇಲ್ಲಿನ ಸೊರಟೂರ ಗ್ರಾಮ ಪಂಚಾಯಿತಿಯಲ್ಲಿ ಎರಡನೇ ಅವಧಿಗೆ ಜಯಶ್ರೀ ಬಂಕಾಪೂರ ಅಧ್ಯಕ್ಷರಾಗಿ, ಮೇಲಗಿರಿಯಪ್ಪಗೌಡ್ರ ಪಾಟೀಲ್ ಉಪಾಧ್ಯಕ್ಷರಾಗಿ ಅವಿರೋಧ ಆಯ್ಕೆಯಾದರು.

ಆಯ್ಕೆಯ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಪಿಡಿಓ ಮಾಹಾಂತೇಶ ಮೇವುಂಡಿ, ಸದಸ್ಯರಾದ ಮಹಬೂಬಸಾಬ ಯಕ್ಲಾಸಪೂರ, ಫಕ್ಕೀರವ್ವ ಹರಿಜನ, ಮರಿಯಪ್ಪ ಸಣ್ಣತಂಗಿಯವರ, ದೇವಕ್ಕಾ ಮಾದಣ್ಣವರ, ಹುಸೇನಬಿ ಚೋಳನ್ನವರ, ರೇಖಾದೇವಿ ಚಪಾಟೆ, ದೇವೆಂದ್ರಪ್ಪ ಅಡ್ರಕಟ್ಟಿ, ಚಂದ್ರವ್ವ ಓಂಕಾರಿ, ಹರಿಶ ಮಲ್ಲಾರಿ, ದೇವಕ್ಕ ಜಮಗಿ, ಶಿವಮೂರ್ತಿ ಕರಿಗೌಡರ, ಲಕ್ಷ್ಮೀ ಮಠಪತಿ, ಪ್ರೇಮವ್ವ ಕಟಗಿ, ಮಾಹಾದೇವಪ್ಪ ಹಡಪದ, ಗಂಗಮ್ಮ ಗಂಟಿ, ಬಸವರಾಜ ಖಾನಾಪೂರ, ದುರಗಪ್ಪಾ ಲಮಾಣಿ, ಸುಮಿತ್ರಾ ಲಮಾಣಿ, ಶಂಕ್ರಪ್ಪಾ ಪವಾರ, ಹಾಗೂ ಗ್ರಾಮದ ಹಿರಿಯರು ಇದ್ದರು.

# ಮನೋರಮಾ ಕಾಲೇಜು ವಿದ್ಯಾರ್ಥಿಗಳ ಸಾಧನೆ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕೆಎಲ್‌ಇ ಸೊಸೈಟಿ ಅಸೋಸಿಯೇಷನ್ ಹಾಗೂ ನೆಹರು ಯುವ ಕೆಂದ್ರ ವತಿಯಿಂದ ಇತ್ತೀಚೆಗೆ ಏರ್ಪಡಿಸಿದ್ದ ವಿವಿಧ ಸ್ಪರ್ಧೆಗಳಲ್ಲಿ ಮನೋರಮಾ ಮಹಾವಿದ್ಯಾಲಯದ ವಿದ್ಯಾರ್ಥಿನಿಯರು ಭಾಗವಹಿಸಿ, ಬಹುಮಾನಗಳನ್ನು ತಮ್ಮದಾಗಿಸಿಕೊಂಡಿದ್ದಾರೆ.



ಭಾಷಣ ಸ್ಪರ್ಧೆಯಲ್ಲಿ ಆಲಿಯಾಫಾತಿಮಾ ಜೈದಿ–ಪ್ರಥಮ, ಸಯ್ಯದಾ ತಂಜಿಮ್ ಖಾಜಿ ದ್ವಿತಿಯ, ಪ್ರಬಂಧ ಸ್ಪರ್ಧೆಯಲ್ಲಿ ಸಿಮ್ರಾನ ಮುಲ್ಲಾ ನಾಲ್ಕನೇಯ ಸ್ಥಾನ ಪಡೆದು ಕಾಲೇಜಿಗೆ ಕೀರ್ತಿ ತಂದಿದ್ದಾರೆ. ವಿಜೇತ ವಿದ್ಯಾರ್ಥಿನಿಯರಿಗೆ ಸಂಸ್ಥೆಯ ಚೇರಮನ್ ಎನ್ ಎಮ್ ಕುಡತರಕರ, ಪ್ರಾಚಾರ್ಯ ಬಿ ಎಸ್ ಹಿರೇಮಠ, ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ಸಂಸ್ಥೆಯ ನಿರ್ದೇಶಕರಾದ ಮಂಜುನಾಥ ಕುಡತರಕರ, ಸಂಜಯಕುಮಾರ ಕುಡತರಕರ, ಚೇತನ ಕುಡತರಕರ ಹಾಗೂ ಸಹಸಂಯೋಜಕರುಗಳಾದ ಪ್ರೊ. ನಿವೇದಿತಾ ಪೊಲೀಸ್‌ಪಾಟೀಲ, ಪ್ರೊ. ಸವಿತಾ ಪೂಜಾರ ಹಾಗೂ ಸಿಬ್ಬಂದಿಗಳು ಅಭಿನಂದಿಸಿದ್ದಾರೆ.

# ಪಡಿತರ ಅಕ್ಕಿ ವಶಕ್ಕೆ: ಪ್ರಕರಣ ದಾಖಲು

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಸೋಮವಾರ ನಸುಕಿನ 3 ಗಂಟೆ ಸುಮಾರಿಗೆ ತಂಗೋಡದಿಂದ ಹೊಳೆ–ಇಟಗಿ ರಸ್ತೆಯಲ್ಲಿ ವಾಹನವೊಂದರಲ್ಲಿ 3 ಜನ ಆರೋಪಿತರು ಅನಧಿಕೃತವಾಗಿ 83 ಸಾವಿರ ರೂ ಕಿಮ್ಮತ್ತಿನ 24.5 ಕ್ವಿಂಟಲ್ ತೂಕದ ಪಡಿತರ ಅಕ್ಕಿಯನ್ನು ಅಕ್ರಮವಾಗಿ ಸಂಗ್ರಹಿಸಿಟ್ಟುಕೊಂಡು ಅದನ್ನು ಸಾಗಾಟ ಮಾಡುತ್ತಿರುವಾಗ ಸಿಕ್ಕಿಬಿದ್ದಿದ್ದಾರೆ.



ಆರೋಪಿತರ ಮೇಲೆ ಅಗತ್ಯ ವಸ್ತುಗಳ ಕಾಯ್ದೆ ಅಡಿ ಶಿರಹಟ್ಟಿ ಆಹಾರ ನಿರೀಕ್ಷಕರು ಸಲ್ಲಿಸಿದ ಸರಕಾರಿ ತರ್ಫಿನ ಫಿರ್ಯಾದಿಯ ಮೇರೆಗೆ ಶಿರಹಟ್ಟಿ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.





ಮೈಸೂರು ಪ್ರವಾಸದಲ್ಲಿ ಇರುವ ರಾಜ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಹಾಗೂ ಪ್ರವಾಸೋದ್ಯಮ ಖಾತೆ ಸಚಿವ ಎಚ್ ಕೆ ಪಾಟೀಲ್, ಮೈಸೂರು ಅರಮನೆಯಲ್ಲಿ ರಾಜಮಾತೆ ಪ್ರಮೋದಾದೇವಿ ಒಡೆಯರ್ ಅವರನ್ನು ಭೇಟಿಯಾಗಿ ಚರ್ಚಿಸಿದರು.

# ಶಾಂತಿಯಿಂದ ಮೊಹರಂ ಆಚರಿಸಿ: ಸಿಪಿಐ ಸುಬ್ಬಾಪೂರಮಠ

■ ವಿಜಯಸಾಕ್ಷಿ ಸುದ್ದಿ, ಗದಗ

ಮೊಹರಂ ಹಬ್ಬದಲ್ಲಿ ಉಪಯೋಗಿಸುವ ಸಕ್ಕರೆಯನ್ನು ಮಿಶ್ರಣ ಮಾಡಬೇಡಿ. ಇಂಥ ಕಲಬೆರಕೆಗೆ ಮುಂದಾಗುವ ಹಾಗೂ ಶಾಂತಿ ಕದಡುವವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಂದು ಬೆಟಗೇರಿ ಪೊಲೀಸ್ ಠಾಣೆ–ಯ ಸಿಪಿಐ ಸುಬ್ಬಾಪೂರಮಠ ತಿಳಿಸಿದರು.

ಠಾಣೆಯಲ್ಲಿ ಹೊಹರಂ ಹಬ್ಬದ ಪ್ರಯುಕ್ತ ಸೋಮವಾರ ಆಯೋಜಿಸಿದ್ದ ಶಾಂತಿ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಹಿಂದೂ–ಮುಸ್ಲಿಂ ಭಾವೈಕ್ಯತೆಯ, ತ್ಯಾಗ–ಬಲಿದಾನದ ಹಬ್ಬ ಮೊಹರಂ. ಈ ಮೊಹರಂ ಹಬ್ಬವನ್ನು ದುಃಖದ ದಿನವೆಂದು ಆಚರಿಸಲಾಗುತ್ತದೆ. ಆದ್ದರಿಂದ ಈ ಹಬ್ಬವನ್ನು ಅತ್ಯಂತ ಶಾಂತಿ–ಸೌಹಾರ್ದತೆಯಿಂದ ಆಚರಿಸಬೇಕೆಂದು ಹೇಳಿದರು.

ಹಬ್ಬದ ಸಂದರ್ಭದಲ್ಲಿ ಪೊಲೀಸ್ ಸಿಬ್ಬಂದಿಗಳ ಸಹಾಯ ಬೇಕಾದರೆ 112ಗೆ ಕರೆ ಮಾಡಿ ತಿಳಿಸಿದರೆ, 15 ನಿಮಿಷಗಳಲ್ಲಿ ಪೊಲೀಸರು ನಿಮ್ಮ ಸಹಾಯಕ್ಕೆ ಬರುತ್ತಾರೆ ಎಂದ ಅವರು, ಎಲ್ಲರೂ ಸುರಕ್ಷಿತವಾಗಿರಬೇಕಾದರೆ ಸಿಸಿ ಕ್ಯಾಮರಾಗಳನ್ನು ಅಳವಡಿಸಲು ವಿನಂತಿಸಿದರು.

ಈ ಸಂದರ್ಭದಲ್ಲಿ ಬೆಟಗೇರಿ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಶ್ರೀನಿವಾಸ ಹುಬ್ಬಳ್ಳಿ, ಬಾಲರಾಜ ಅರಬರ, ನಾಗರಾಜ ಗೋಕಾವಿ, ಸಂತೋಷ ಬಣಕಾರ, ಮಹಾಂತೇಶ ಮಡಿವಾಳರ, ಬೆಟಗೇರಿ ಭಾಗದ ಹಿಂದೂ–ಮುಸ್ಲಿಂ ಬಾಂಧವರು ಭಾಗವಹಿಸಿದ್ದರು.



### ನಾಯಕತ್ವ ಶಿಬಿರದ ಸಮಾರೋಪ ಸಮಾರಂಭದಲ್ಲಿ ಮುಪ್ಪಿನ ಬಸವಲಿಂಗ ಶ್ರೀಗಳು

# ಸಹನೆಯುಳ್ಳವ ಉತ್ತಮ ನಾಯಕನಾಗಬಲ್ಲ



> ನಾಯಕನಾಗಲು ಸಮಾಜದಲ್ಲಿ ತೊಡಗಿಸಿಕೊಂಡ ವ್ಯಕ್ತಿಯು ಸಾಕಷ್ಟು ನೋವುಗಳನ್ನು ಅನುಭವಿಸಬೇಕಾಗುತ್ತದೆ. ನೋವುಗಳನ್ನು ಸಹಿಸಿಕೊಂಡ ವ್ಯಕ್ತಿ ನಾಯಕನಾಗುತ್ತಾನೆ. ಬರುವ ಎಲ್ಲ ಸಮಸ್ಯೆಗಳಿಗೂ ಎದೆಗೊಟ್ಟು ನಿಲ್ಲುವ, ಅವುಗಳಿಗೆ ಸೂಕ್ತ ಪರಿಹಾರ ಒದಗಿಸಬಲ್ಲ ವ್ಯಕ್ತಿ ಮಾತ್ರ ಉತ್ತಮ ನಾಯಕನಾಗಬಲ್ಲ. ನೀವು ಅಂತಹ ನಾಯಕರಾದರೆ ಮಾತ್ರ ನಿಮ್ಮ ಭವಿಷ್ಯ ಉಜ್ವಲವಾಗುತ್ತದೆ.
>
> **– ಜ. ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು.**
> ಹಾಲಕೆರೆ ಸಂಸ್ಥಾನ ಮಠ.

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಜೀವನದಲ್ಲಿ ನಾಯಕನಾಗಬೇಕೆನ್ನುವವನಿಗೆ ಮೊದಲು ಬೆಟ್ಟದಷ್ಟು ಸಹನೆಯಿರಬೇಕು. ಸಹನೆ ಇದ್ದವ ಖಂಡಿತವಾಗಿಯೂ ಉತ್ತಮ ನಾಯಕನಾಗಬಲ್ಲ. ಈ ಶಿಬಿರದಲ್ಲಿ ನೀವು ಪಡೆದಿರುವ ನಾಯಕತ್ವದ ತರಬೇತಿ ಬರೀ ಶಿಬಿರಕ್ಕಷ್ಟೇ ಸೀಮಿತವಾಗಬಾರದು. ಜೀವನದುದ್ದಕ್ಕೂ ಇಲ್ಲಿ ಕಲಿತ ನಾಯಕತ್ವದ ಗುಣಗಳನ್ನು ಅಳವಡಿಸಿಕೊಂಡು ಉತ್ತಮ ನಾಯಕರಾಗಬೇಕೆಂದು ಹಾಲಕೆರೆ ಸಂಸ್ಥಾನ ಮಠದ ಜ. ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ಕಿವಿಮಾತು ಹೇಳಿದರು.

ಪಟ್ಟಣದ ಶ್ರೀ ಅನ್ನದಾನೇಶ್ವರ ಪದವಿ ಮಹಾವಿದ್ಯಾಲಯದಲ್ಲಿ ನಡೆದ ಎನ್‌ಎಸ್‌ಎಸ್ ವಿಶೇಷ ನಾಯಕತ್ವ ಶಿಬಿರದ ಸಮಾರೋಪ ಸಮಾರಂಭದ ದಿವ್ಯ ಸಾನಿಧ್ಯವಹಿಸಿ ಶ್ರೀಗಳು ಆಶೀರ್ವಚನ ನೀಡಿದರು.

ಮಾಜಿ ಶಾಸಕ ಎಸ್ ಜಿ ನಂಜಯ್ಯನಮಠ ಮಾತನಾಡಿ, ಎನ್‌ಎಸ್‌ಎಸ್ ನಮಗೆ ಸೇವೆಯನ್ನು ಕಲಿಸಿದರೆ, ಎನ್‌ಸಿಸಿ ಜೀವನದಲ್ಲಿ ಶಿಸ್ತನ್ನು ಕಲಿಸಿದೆ. ಸವಿಸವಿ ನೆನಪುಗಳು ಎಂದಿಗೂ ನೆಮ್ಮದಿಯನ್ನು ಕೊಡುತ್ತವೆ. ಆಗಾಗ ನಮ್ಮ ಜೀವನದ ಘಟನೆಗಳ ಸಿಂಹಾವಲೋಕನ ಮಾಡಿಕೊಂಡು ಮುನ್ನಡೆಯಬೇಕು. ಆಗಲೇ ಜೀವನಕ್ಕೊಂದು ಅರ್ಥ ದೊರಕುತ್ತದೆ. ಪ್ರತಿ ವ್ಯಕ್ತಿಯೂ ತನ್ನ ಜೀವನದ ಪರ್ಯಂತ ಕಲಿಯುವುದು ಇದ್ದೇ ಇರುತ್ತದೆ. ಹೀಗಾಗಿ ಪ್ರತಿ ವ್ಯಕ್ತಿಯೂ ವಿದ್ಯಾರ್ಥಿಯೇ ಆಗಿರುತ್ತಾನೆ. ಜ್ಞಾನಕ್ಕಿಂತ ಮಿಗಿಲಾದ ಆಸ್ತಿ ಯಾವುದೂ ಇಲ್ಲ. ನಿಮ್ಮ ಗುರು ಹಿರಿಯರನ್ನು ಗೌರವಿಸುವ ಗುಣವನ್ನು ಬೆಳೆಸಿಕೊಂರೆ ನೀವು ಜೀವನದುದ್ದಕ್ಕೂ ಸುಖವಾಗಿರುತ್ತೀರಿ ಎಂದು ಹೇಳಿದರು.

ಕರ್ನಾಟಕ ವಿಶ್ವವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ ಸಂಯೋಜನಾಧಿಕಾರಿ ಡಾ. ಎಂ ಬಿ ದಳಪತಿ ಮಾತನಾಡಿ, ಕವಿವಿ ವ್ಯಾಪ್ತಿಯಲ್ಲಿ ಎನ್‌ಎಸ್‌ಎಸ್ ವತಿಯಿಂದ 4552 ಶೌಚಾಲಯಗಳನ್ನು ನಿರ್ಮಾಣ ಮಾಡಲಾಗಿದೆ. ಅನೇಕ ಸ್ಥಳಗಳಲ್ಲಿ ರಸ್ತೆ, ಕೆರೆ, ನಿರ್ಮಿಸಿ, 208 ಕೆರೆಗಳ ದತ್ತು ಪಡೆದು ಅವುಗಳ ಸಂರಕ್ಷಣೆ ಮಾಡಲಾಗಿದೆ. ನಿಮ್ಮ ಮನೆಯಲ್ಲಿ ನಿಮ್ಮ ಹುಟ್ಟು ಹಬ್ಬವನ್ನು ಆಚರಿಸುವುದಾದರೆ ಅದನ್ನು ಸಸಿ ನೆಡುವ ಮೂಲಕ ಆಚರಿಸಿರಿ ಎಂದು ಹೇಳಿದರು.

ಸಂಸ್ಥೆ ಆಡಳಿತಾಧಿಕಾರಿ ಎನ್ ಆರ್ ಗೌಡರ ಅಧ್ಯಕ್ಷತೆ ವಹಿಸಿದ್ದರು.

ವೇದಿಕೆಯ ಮೇಲೆ ಸಂಸ್ಥೆಯ ಸದಸ್ಯ ವಿ ವಿ ವಸ್ತ್ರದ, ಕಾರ್ಯಕ್ರಮಾಧಿಕಾರಿ ಡಾ. ರತ್ನಾ ಪಾಟೀಲ ಉಪಸ್ಥಿತರಿದ್ದರು. ಸಂಚಾಲಕ ಜಿ ಜಿ ಕೋಟಿ ನಿರೂಪಿಸಿದರು. ಪ್ರಾಚಾರ್ಯ ಎಸ್ ಜಿ ಕೇಶಣ್ಣವರ ಸ್ವಾಗತಿಸಿದರು. ಡಾ. ಕಲ್ಲಯ್ಯ ಹಿರೇಮಠ ವಂದಿಸಿದರು.

# ವಿದ್ಯಾರ್ಥಿ ಜೀವನದಲ್ಲಿ ಸಾಧನೆಗೆ ಛಲ ಬೇಕು



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ವಿದ್ಯಾರ್ಥಿ ಜೀವನದಲ್ಲಿ ಮಕ್ಕಳಿಗೆ ಛಲವಿರಬೇಕು ಎಂದು ನಿವೃತ್ತ ಸಹಾಯಕ ಕೃಷಿ ಅಧಿಕಾರಿ ಎಂ.ಬಿ.ಸುಂಕಾಪೂರ ಹೇಳಿದರು.

ಅವರು ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿಗಳ ಗವಿಮಠದ ಸಭಾಭವನದಲ್ಲಿ ಜರುಗಿದ ಕರ್ನಾಟಕ ರಾಜ್ಯ ಹಸಿರು ಸೇನೆಯ ಮುಳಗುಂದ ಘಟಕದಿಂದ ಸಾಧಕ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಮಾತನಾಡಿ, ರೈತರ ಮಕ್ಕಳು ಇಂದು ವಿವಿಧ ಕ್ಷೇತ್ರದಲ್ಲಿ ಉನ್ನತ ಸ್ಥಾನಕ್ಕೇರಿದ್ದಾರೆ. ವಿದ್ಯಾರ್ಥಿ ಜೀವನದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ್ದು ಹೆಮ್ಮೆಯ ವಿಷಯವಾಗಿದೆ. ನಾವು ಅವರಿಗೆಲ್ಲರಿಗೂ ಪ್ರೋತ್ಸಾಹ ನೀಡಿ ಬೆಳೆಸೋಣ ಎಂದರು.

ಈ ಸಂದರ್ಭದಲ್ಲಿ ಯೋಗ ಶಿಕ್ಷಕ ಪ್ರಕಾಶ ಮದ್ದಿನ, ಕಬಡ್ಡಿ ಕ್ರೀಡಾಪಟು ಗಂಗಮ್ಮಾ ಅವ್ವಣ್ಣವರ, ಪಿಯುಸಿಯಲ್ಲಿ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದು ಸಾಧನೆ ಮಾಡಿದ ಅಂದಾನಮ್ಮಾ ಬಳ್ಳಾರಿ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು. ಅಧ್ಯಕ್ಷತೆಯನ್ನು ರೈತ ಸಂಘದ ಅಧ್ಯಕ್ಷ ಬಸವರಾಜ ಕರಿಗಾರ ವಹಿಸಿದ್ದರು. ಮಹ್ಮದಲಿ ಶೇಖ, ಮಂಗಳಾ ನೀಲಗುಂದ, ಕೀರಣ ಕುಲಕರ್ಣಿ, ಜಿ.ಎಂ.ಗಾಡಿ, ಮಾಹಾಂತೇಶ ಗುಂಜಳ ಹಾಗೂ ರೈತ ಸಂಘದ ಪದಾದಿಕಾರಿಗಳು ಇದ್ದರು.

# ಗದಗ ಜಿಲ್ಲಾ ವ್ಹಿಎಚ್‌ಪಿಯಿಂದ ತಿಲಕ ಜಯಂತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಅಪ್ರತಿಮ ದೇಶಭಕ್ತರಾದ ಬಾಲ ಗಂಗಾಧರ ತಿಲಕರು ದೇಶಕ್ಕೆ ಸಲ್ಲಿಸಿದೆ ಸೇವೆ ಅನುಪಮವಾದದ್ದು, ಅವರ ಸೇವೆಯನ್ನು ಲೋಕವೇ ಮಾನ್ಯ ಮಾಡಿದೆ. ಲೋಕಮಾನ್ಯ ತಿಲಕರ ತತ್ವ ಆದರ್ಶಗಳನ್ನು ಅಳವಡಿಸಿಕೊಳ್ಳುವದು ಅವಶ್ಯವಿದೆ ಎಂದು ವಿಶ್ವ ಹಿಂದೂ ಪರಿಷತ್ತಿನ ಗದಗ ಜಿಲ್ಲಾ ಕಾರ್ಯದರ್ಶಿ ರಾಘವೇಂದ್ರ ಹಬೀಬ ಅಭಿಪ್ರಾಯಪಟ್ಟರು.




ಅವರು ರವಿವಾರ ಗದುಗಿನ ಲೋಕಮಾನ್ಯ ಬಾಲಗಂಗಾಧರ ತಿಲಕ ಪಾರ್ಕ್‌ದಲ್ಲಿ ವಿಶ್ವ ಹಿಂದೂ ಪರಿಷತ್ತಿನಿಂದ ಏರ್ಪಡಿಸಿದ್ದ ತಿಲಕ ಜಯಂತಿ ಕಾರ್ಯಕ್ರಮದಲ್ಲಿ ತಿಲಕರ ಮೂರ್ತಿಗೆ ಮಾಲಾರ್ಪಣೆ ಮಾಡಿ ಮಾತನಾಡಿದರು. 'ಸ್ವರಾಜ್ಯವೇ ನಮ್ಮ ಜನ್ಮ ಸಿದ್ಧ ಹಕ್ಕು' ಎಂದು ಘರ್ಜಿಸುವ ಮೂಲಕ ಬ್ರಿಟೀಷರ ವಿರುದ್ಧ ಹೋರಾಟ ನಡೆಸಿ ಸ್ವಾತಂತ್ರ್ಯ ಚಳುವಳಿಯಲ್ಲಿ ಮುಂಚೂಣಿಯಲ್ಲಿದ್ದವರಲ್ಲಿ ತಿಲಕರೂ ಒಬ್ಬರಾಗಿದ್ದರು. ಸಾರ್ವಜನಿಕ ಗಣೇಶೋತ್ಸವ ನೆಪದಲ್ಲಿ ಜನಸಂಘಟನೆ ಮಾಡಿ, ಜನಮನದಲ್ಲಿ ಸ್ವತಂತ್ರ ಭಾರತದ ಬೀಜ ಬಿತ್ತಿದ ಅಪ್ರತಿಮ ದೇಶ ಭಕ್ತ ಎಂದು ಬಣ್ಣಿಸಿದರು. ಕಾರ್ಯಕ್ರಮದಲ್ಲಿ ವಿಶ್ವ ಹಿಂದೂ ಪರಿಷತ್ತಿನ ಗದಗ ಜಿಲ್ಲಾ ಘಟಕದ ಪದಾಧಿಕಾರಿಗಳು, ಧರ್ಮಚಾರ್ಯ ಸಂಪರ್ಕ ಪ್ರಮುಖ ಮಾರುತಿ ದಹಿಂಡೆ, ಭಜರಂಗದಳದ ಸಂಯೋಜಕರಾದ ಗಣೇಶ ಲದವಾ, ಶಂಕರ್ ದಹಿಂಡೆ, ಸಚಿನ್ ಮಡಿವಾಳರ, ಗಣೇಶ ಸೋಳಂಕಿ ಸೇರಿದಂತೆ ಕಾರ್ಯಕರ್ತರು ಪಾಲ್ಗೊಂಡಿದ್ದರು.



'ಮಹಿಳೆಯರ ಸುರಕ್ಷತೆ ಮತ್ತು ಕಾನೂನು ಅರಿವು' ಕುರಿತು ಉಪನ್ಯಾಸ ಕಾರ್ಯಕ್ರಮ

# ಕಾನೂನು ಅರಿತರೆ ಸುಸಂಸ್ಕೃತ ಸಮಾಜ ನಿರ್ಮಾಣ ಸಾಧ್ಯ



■ ವಿಜಯಸಾಕ್ಷಿ ಸುದ್ದಿ, ಗದಗ

ಪೊಲೀಸ್ ಇಲಾಖೆ ಮಹಿಳೆಯರ ಸುರಕ್ಷತೆಗಾಗಿ ತಿಳಿಸುವ ಮಾಹಿತಿಗಳನ್ನು ಮಹಿಳೆಯರು ಪಾಲಿಸಿದರೆ ಕಳ್ಳತನ, ಅನೀತಿ, ಅತ್ಯಾಚಾರ, ಅಸಭ್ಯತೆ ಇನ್ನಿತರೆ ಅವಘಡಗಳು ಇಲ್ಲದಾಗಿ ಸಮಾಜದಲ್ಲಿ ಶಾಂತಿ-ಸುವ್ಯವಸ್ಥೆ ನೆಲೆಗೊಳ್ಳಲು ಸಾಧ್ಯವಾಗುತ್ತದೆ ಎಂದು ಮಹಿಳಾ ಪೊಲೀಸ್ ಪೇದೆ ಜಯಲಕ್ಷ್ಮೀ ಆರ್ ಕಮತರ ತಿಳಿಸಿದರು.

ಎಸ್‌ವಾಯ್‌ಬಿಎಂಎಸ್ ಯೋಗ ಪಾಠಶಾಲೆಯ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ ಸಿದ್ಧಲಿಂಗ ನಗರ ಗದಗ ಇವರು 'ಮಹಿಳೆಯರ ಸುರಕ್ಷತೆ ಮತ್ತು ಕಾನೂನು ಅರಿವು' ಕುರಿತು ಮಹಿಳೆಯರಿಗಾಗಿ ಸಿದ್ಧಲಿಂಗ ನಗರದಲ್ಲಿನ ಬಸವಯೋಗ ಮಂದಿರದಲ್ಲಿ ಆಯೋಜಿಸಿದ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಉಪನ್ಯಾಸ ನೀಡಿದರು.

ಅಧ್ಯಕ್ಷತೆ ವಹಿಸಿದ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಅಧ್ಯಕ್ಷೆ ಜಯಶ್ರೀ ವಸ್ತ್ರದ ಮಾತನಾಡಿ, ಮಹಿಳೆಯರಿಗೆ ಕೌಟುಂಬಿವಾಗಿ, ಸಾಮಾಜಿಕವಾಗಿ, ಕಾನೂನಾತ್ಮಕವಾಗಿ ಯಾವುದೇ ಸಮಸ್ಯೆಗಳು ಎದುರಾದರೆ ಧೈರ್ಯದಿಂದ ಸಂಬಂಧಿಸಿದ ಇಲಾಖೆಗಳಿಗೆ ಮಾಹಿತಿ ನೀಡಿದರೆ ಸಮಸ್ಯೆಗಳಿಗೆ ಪರಿಹಾರ ದೊರೆತು ಶಾಂತಿ, ನೆಮ್ಮದಿಯಿಂದ ಇರಲು ಸಾಧ್ಯವಾಗುತ್ತದೆ ಎಂದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ ಹೆಡ್ ಕಾನ್ಸ್‌ಟೇಬಲ್ ನಾರಾಯಣಗೌಡ ಎಸ್ ತಾಯನ್ನವರ, ಮಹಿಳಾ ಪೇದೆ ಶಂಕ್ರಮ್ಮ ಕೊರವರ ಇವರು ಸಭಿಕರ ಅನೇಕ ಪ್ರಶ್ನೆಗಳಿಗೆ ಉತ್ತರಿಸಿದರು.

ವೇದಿಕೆಯಲ್ಲಿ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಗೌರವಾಧ್ಯಕ್ಷೆ ಅನ್ನಪೂರ್ಣ ವರವಿ, ವಿಜಯಲಕ್ಷ್ಮೀ ಆನೇಹೊಸೂರ, ನೀಲಾಂಬಿಕಾ ತೆ-ಳೀಟಿಗೇರ, ಅರುಣಾ ಇಂಗಳಳ್ಳಿ, ಲಲಿತಾ ಅಣ್ಣಿಗೇರಿ, ಅಬೀದಾ ಶೇಖ, ವಿಜಯಲಕ್ಷ್ಮೀ ಮೇಕಳಿ, ಸೌಮ್ಯ ಶೆಟ್ಟರ, ಶಶಿಕಲಾ ಬೆಲ್ಲದ, ಗೌರಿ ಜಿರಂಕಳಿ, ಗಿರಿಜಾ ಅಂಗಡಿ, ಜ್ಯೋತಿ ಜಾನೋಪಂತರ, ಸಂಗೀತಾ ಮಡಿವಾಳರ, ಚೈತ್ರಾ ಹದ್ದಣ್ಣವರ, ಶಾಂತಾ ಕುಂದಗೋಳ, ಶೋಭಾ ಭಾಂಡಗೆ, ವೀಣಾಶ್ರೀ ಮಾಲಿಪಾಟೀಲ, ರೇಣುಕಾ, ದ್ಯಾಮನ್ನವರ, ಲಕ್ಷ್ಮೀ ಮರಡ್ಡಿ ಉಪಸ್ಥಿತರಿದ್ದರು.

ಗಿರಿಜಾ ನಾಲತ್ವಾಡಮಠ ಮತ್ತು ಸಂಗಡಿಗರು ಪ್ರಾರ್ಥಿಸಿದರು. ವಿಜಯಾ ಚನ್ನಶೆಟ್ಟಿ ಸ್ವಾಗತಿಸಿದರು. ಶಾಂತಾ ಮುಂದಿನಮನಿ ಕಾರ್ಯಕ್ರಮ ನಿರೂಪಿಸಿದರು. ಸುನಂದಾ ಜ್ಯಾನೋಪಂತರ ವಂದಿಸಿದರು.

# ಮಾಜಿ ಉಪಮುಖ್ಯಮಂತ್ರಿ ಕೆ.ಎಸ್ ಈಶ್ವರಪ್ಪರಿಗೆ ಸನ್ಮಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಸುಕ್ಷೇತ್ರ ಮೈಲಾರದಲ್ಲಿ ಶ್ರೀ ಕಾಗಿನೆಲೆ ಪೀಠದ ಜಗದ್ಗುರು ಶ್ರೀ ನಿರಂಜನಾನಂದಪುರಿ ಸ್ವಾಮೀಜಿ, ಕೂಡಲಸಂಗಮ ಪಂಚಮಸಾಲಿ ಪೀಠದ ಜಗದ್ಗುರು ಶ್ರೀ ಬಸವಜಯ ಮೃತ್ಯುಂಜಯ ಸ್ವಾಮೀಜಿ, ಶ್ರೀ ಜಗದ್ಗುರು ಶಿವಯೋಗಿ ಹಾಲಸ್ವಾಮೀಜಿ ಗೊವರಯ್ಯನವರ ಸಾನ್ನಿಧ್ಯದಲ್ಲಿ ಮಾಜಿ ಉಪಮುಖ್ಯಮಂತ್ರಿ ಕೆ.ಎಸ್ ಈಶ್ವರಪ್ಪನವರ ಕುಟುಂಬ ಪರಿವಾರದೊಂದಿಗೆ



ಮೈಲಾರಲಿಂಗೇಶ್ವರನಿಗೆ ಅಭಿಷೇಕ ಹಾಗೂ ದೋಣಿ ತುಂಬಿಸುವ ಕಾರ್ಯಕ್ರಮ ಜರುಗಿತು.

ಈ ಸಂದರ್ಭದಲ್ಲಿ ಗದಗ ಜಿಲ್ಲೆಯ ಬಿಜೆಪಿ ಮುಖಂಡರಾದ ರಮೇಶ ಎನ್ ಸಜ್ಜಗಾರ, ಬಿಂಕದಕಟ್ಟಿ ಗ್ರಾ ಪಂ ಉಪಾಧ್ಯಕ್ಷ ಅಶೋಕ ಕರೂರ, ಮುತ್ತಪ್ಪ ಮೂಲಿಮನಿ, ಹನಮಂತ ದಿಂಡೇನವರ, ಮಂಜುನಾಥ ಶಾಂತಗೇರಿ, ಮಾಲತೇಶ ಶ್ಯಾಗೋಟಿ, ಮುಂತಾದವರು ಮಾಜಿ ಉಪಮುಖ್ಯಮಂತ್ರಿ ಕೆ.ಎಸ್ ಈಶ್ವರಪ್ಪನವರಿಗೆ ಹಾಗೂ ಅವರ ಪುತ್ರ ಕೆ ಈ ಕಾಂತೇಶರನ್ನು ಸನ್ಮಾನಿಸಿ ಗೌರವಿಸಿದರು.

# ಮಳೆಯ ನಡುವಿನ ಜನಜೀವನ







■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸೋಮವಾರವೂ ಧೋ ಎಂದು ಸುರಿದ ಮಳೆಯ ನಡುವೆಯೂ ಜನತೆ ತಮ್ಮೆಲ್ಲ ಕೆಲಸ-ಕಾರ್ಯಗಳನ್ನು ಅನಿವಾರ್ಯವಾಗಿ ಮಳೆಯಲ್ಲಿ ನೆನೆಯುತ್ತಲೇ ಪೂರ್ಣಗೊಳಿಸಿದರು. ಸತತ ಮಳೆಯಿಂದ ಬೆಳೆಹಾನಿ, ರೋಗಬಾಧೆಗೆ ತುತ್ತಾಗುವ, ಕಳೆ ಹೆಚ್ಚಾಗುವ ಆತಂಕ ರೈತರನ್ನು ಕಾಡುತ್ತಿದೆ.



ನೆರೆಯ ಧಾರವಾಡ, ಹಾವೇರಿ ಜಿಲ್ಲೆಯ ಶಾಲೆಗಳಿಗೆ ರಜೆ ಘೋಷಿಸಿರುವ ಹಿನ್ನಲೆಯಲ್ಲಿ ನಮ್ಮ ಜಿಲ್ಲೆಯಲ್ಲಿಯೂ ರಜೆ ಘೋಷಿಸಬಹುದು ಎಂದು ಎದುರು ನೋಡಿ ನಿರೀಕ್ಷೆ ಹುಸಿಯಾಗುತ್ತಿದ್ದಂತೆಯೇ ಶಾಲಾ ಮಕ್ಕಳು, ಶಿಕ್ಷಕರು ಮಳೆಯಲ್ಲಿಯೇ ಛತ್ರಿ, ರೇನ್‌ಕೋಟ್, ಜರ್ಕಿನ್ ಹಾಕಿಕೊಂಡು ಶಾಲೆಯತ್ತ ಸಾಗಿದರು. ಸೋಮವಾರ ಕೃಷಿ ಚಟುವಟಿಕೆ ಇಲ್ಲದ್ದರಿಂದ ಗ್ರಾಮೀಣ ಭಾಗದ ಜನರು ಸೋರುವ ಮನೆ ರಕ್ಷಣೆಗೆ ಪ್ಲಾಸ್ಟಿಕ್ ಖರೀದಿ ಮತ್ತು ರೈತರು ರಸಗೊಬ್ಬರ, ಕ್ರಿಮಿನಾಶಕ ಖರೀದಿಗಾಗಿ ಅಂಗಡಿಗಳತ್ತ ಸಾಗಿದರು. ಮಳೆಯ ನಡುವೆಯೂ ಮಾರುಕಟ್ಟೆ ಪ್ರದೇಶ ಜನದಟ್ಟಣೆಯಿಂದ ಕೂಡಿತ್ತು.

ಮಳೆ ನಿಲ್ಲುತ್ತಿಲ್ಲವಾದ್ದರಿಂದ ಪಟ್ಟಣ ಸೇರಿ ತಾಲೂಕಿನಾದ್ಯಂತ ಕುಸಿದು ಬೀಳುವ ಮನೆಗಳ ಸಂಖ್ಯೆ ಹೆಚ್ಚಾಗುತ್ತಿದೆ. ಯಳವತ್ತಿ, ಗೊಜನೂರ, ಬಾಲೇಹೊಸೂರ, ಹುಲ್ಲೂರ, ಬಡ್ನಿ, ಸೂರಣಗಿ, ಶಿಗ್ಲಿ ಸೇರಿ ಹತ್ತಾರು ಕಡೆ ಮನೆಗಳು ಕುಸಿದಿವೆ. ಜಿನುಗುತ್ತಿರುವ ಮನೆಯಲ್ಲಿಯೇ ಜನರು ಪಡಬಾರದ ಯಾತನೆ ಅನುಭವಿಸುತ್ತಿದ್ದಾರೆ. ವಾಹನ ಸವಾರಿಯಂತೂ ತಗ್ಗು-ದಿಣ್ಣೆಗಳಿಂದ ಕೂಡಿದ ರಸ್ತೆಗಳಲ್ಲಿ ಸಾಕ್ಷಾತ್ ನರಕ ದರ್ಶನ ಮಾಡಿಸುತ್ತಿದೆ.

# ಶ್ರೀ ಜ.ಫಕೀರೇಶ್ವರ ಮಠ ಭಾವೈಕ್ಯತೆಯ ಪ್ರತೀಕ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿಯ ಕರ್ತೃ ಶ್ರೀ ಜ.ಫಕೀರೇಶ್ವರ ಮಠವು ಭಾವೈಕ್ಯತೆಯ ಪ್ರತೀಕವಾಗಿದ್ದು, ಕಳೆದ ನೂರಾರು ವರ್ಷಗಳಿಂದಲೂ ಶ್ರೀಮಠದಲ್ಲಿ ಸಮಾಜಕ್ಕೆ ಸಾಮರಸ್ಯದ ಸಂಕೇತವಾಗಿ ಕಂಗೊಳಿಸುತ್ತಾ, ಭಾವೈಕ್ಯತೆಯ ಪೀಠವಾಗಿ ಇಡೀ ದೇಶಕ್ಕೆ ಭಾವೈಕ್ಯತೆಯ ಪ್ರತೀಕವೆನಿಸಿದೆ ಎಂದು ಶಿರಹಟ್ಟಿಯ ಶ್ರೀ ಜ.ಫಕೀರೇಶ್ವರ ಸಂಸ್ಥಾನಮಠದ 13ನೇ ಪೀಠಾಧ್ಯಕ್ಷ ಜ.ಫ.ಸಿದ್ದರಾಮ ಸ್ವಾಮೀಜಿ ಹೇಳಿದರು.

ಅವರು ಸೋಮವಾರ ಶಿರಹಟ್ಟಿ ತಾಲೂಕಿನ ಬನ್ನಿಕೊಪ್ಪ ಗ್ರಾಮದ ಮುಸ್ಲಿಂ ಬಾಂಧವರು ಮೊಹರಂ ಹಬ್ಬದ ಪ್ರಯುಕ್ತ ಶ್ರೀಮಠಕ್ಕೆ ತಂದಿದ್ದ ದೇವರುಗಳಿಗೆ ಪೂಜೆ ಸಲ್ಲಿಸಿ ಓದುಕಿ ನೆರವೇರಿಸಿ ಮಾತನಾಡಿದರು.



ಈ ಹಿಂದೆ ಅನೇಕ ಕಷ್ಟದ ಸಂಕೋಲೆಗಳನ್ನು ಎದುರಿಸಿದ್ದ ಬನ್ನಿಕೊಪ್ಪ ಗ್ರಾಮದ ಮುಸ್ಲಿಂ ಬಾಂಧವರಿಗೆ ಓರ್ವ ಹಿರಿಯರ ವಾಣಿಯಂತೆ ಶಿರಹಟ್ಟಿಯ ಶ್ರೀ ಜ.ಫಕೀರೇಶ್ವರ ಮಠಕ್ಕೆ ದೇವರುಗಳನ್ನು ತೆಗೆದುಕೊಂಡು ಹೋಗಿ ಪೂಜೆ ಸಲ್ಲಿಸಿದರೆ ಒಳ್ಳೆಯದಾಗುತ್ತದೆ, ಸುಖ-ಶಾಂತಿ, ಸಮೃದ್ಧಿ ಪ್ರಾಪ್ತಿಯಾಗುತ್ತದೆ ಎಂದಿದ್ದರು.

ಅದರಂತೆ ಕಳೆದ ವರ್ಷದಿಂದ ಗ್ರಾಮಸ್ಥರು ಶ್ರೀಮಠಕ್ಕೆ ದೇವರುಗಳನ್ನು ತೆಗೆದುಕೊಂಡು ಬಂದು ಪೂಜೆ ಸಲ್ಲಿಸಿ, ಪುನಃ ತೆಗೆದುಕೊಂಡು ಗ್ರಾಮದಲ್ಲಿ ಪ್ರತಿಷ್ಠಾಪಿಸಿ ಹಬ್ಬವನ್ನು ಆಚರಿಸುತ್ತಾ ಬರುತ್ತಿದ್ದಾರೆ.

ಕರ್ತೃ ಶ್ರೀ ಫಕೀರೇಶ್ವರರ 'ದ್ವೇಷ ಬಿಡು-ಪ್ರೀತಿ ಮಾಡು' ಎಂಬ ದಿವ್ಯ ಸಂದೇಶವನ್ನು ಸಾರಿ, ಸಮಾಜದಲ್ಲಿ ಎಲ್ಲರೂ ಒಂದೇ ಎಂಬ ಭಾವನೆಯನ್ನು ಮೂಡಿಸುವುದೇ ಶ್ರೀಮಠದ ಪರಂಪರೆಯಾಗಿದೆ.

ಇಂದಿನ ದಿನಗಳಲ್ಲಿ ಅಲ್ಲಲ್ಲಿ ಕೋಮು ಸಾಮರಸ್ಯ ಕದಡುವ ಪ್ರಕರಣಗಳು ನಡೆಯುತ್ತಿರುವುದು ವಿಷಾದನೀಯ. ಇವುಗಳಿಗೆ ನಮ್ಮ ಮಠವು ಮಾದರಿಯಾಗಿದೆ. ವಿಶೇಷವಾಗಿ ಮೊಹರಂ ಹಬ್ಬದ ಸಂದರ್ಭದಲ್ಲಿ ಶ್ರೀಮಠದ ವ್ಯಾಪ್ತಿಯಲ್ಲಿ ಬರುವ ಎಲ್ಲ ಮಸೀದಿಗಳಲ್ಲಿಯೂ ಸಹ ದೇವರುಗಳನ್ನು ಪೂಜಿಸಲಾಗುತ್ತಿದೆ ಎಂದರು.

ವಿಶ್ವ ಅರ್ಹತೆಯ ದಿನಾಚರಣೆ ಕಾರ್ಯಕ್ರಮದಲ್ಲಿ ಶಿವನಗೌಡ ಗೌಡರ ಅಭಿಪ್ರಾಯ

# ಮಾನವೀಯತೆಯ ಗುಣಾಂಶಗಳ ಅರ್ಹತೆ ಹೊಂದಿರಬೇಕು

■ ವಿಜಯಸಾಕ್ಷಿ ಸುದ್ದಿ, ಗದಗ

ವ್ಯಕ್ತಿಯಾದವ ತನ್ನ ವೈಯಕ್ತಿಕ ಬದುಕಿನೊಂದಿಗೆ ಇನ್ನಿತರರ ಬದುಕಿನ ಬಗ್ಗೆ ಚಿಂತನೆ, ಸಮಾಜದೊಡನೆ ಸ್ನೇಹ ಭಾವಹೊಂದಿ ರಾಷ್ಟ್ರ ಸೇವೆಗೆ ಸನ್ನದ್ಧನಾಗಿರುವುದು ಮಾನವೀಯ ಮೌಲ್ಯಗಳಾಗಿವೆ. ಮಾನವೀಯ ಮೌಲ್ಯಗಳನ್ನು ಪರಿಪಾಲಿಸಿ ಸಂರಕ್ಷಿಸುವುದು ನಮ್ಮ ಕರ್ತವ್ಯವಾಗಿದೆ ಎಂದು ಬಸವೇಶ್ವರ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಶಿವನಗೌಡ ಗೌಡರ ತಿಳಿಸಿದರು.

ಶ್ರೀಮನ್ನಿರಂಜನ ಯಳಂದೂರು ಬಸವಲಿಂಗ ಮಹಾಸ್ವಾಮಿಗಳವರ ಸ್ಮಾರಕ ಯೋಗಪಾಠಶಾಲೆಯ ನಿತ್ಯ ಯೋಗ ಸಾಧನೆ ವರ್ಗದ ಸಾಧಕರೆಲ್ಲ ಸೇರಿ ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರದಲ್ಲಿ ನಡೆಸಿದ



ವಿಶ್ವ ಅರ್ಹತೆಯ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ನೆದರ್‌ಲ್ಯಾಂಡಿನಲ್ಲಿ ಉದ್ದಿಮೆದಾರರಾಗಿರುವ ವಿನಯ ಹಿರೇಮಠ ಮಾತನಾಡಿ, ಬಾಲ್ಯಾವಸ್ಥೆಯಿಂದಲೇ ನಾವು ನಮ್ಮ ಭಾರತೀಯ ಪರಂಪರೆ, ಆಚಾರ-ವಿಚಾರ, ಊಟ-ಉಡಿಗೆ, ವಿದ್ಯೆ-ವಿನಯಗಳನ್ನು ಅರಿತು ಆಚರಿಸಿದ್ದಾದರೆ ಆದರ್ಶ ವ್ಯಕ್ತಿಗಳು ನಾವಾಗುತ್ತೇವೆ.

ನಮ್ಮಂತೆ ನಮ್ಮ ಜನಾಂಗ, ನಮ್ಮ ಪರಿಸರಗಳು ಆದರ್ಶಮಯವಾಗಿ ವಿಶ್ವ ಮಾನ್ಯತೆಗೆ ಅರ್ಹರಾಗುತ್ತೇವೆಂದು ತಮ್ಮ ಅನುಭವದ ಅನಿಸಿಕೆಗಳನ್ನು ತಿಳಿಸಿದರು.

> ಇಂದು ನಾವು ನೌಕರಿ ಪಡೆಯಲು, ಉದ್ಯೋಗಾವಕಾಶ ಹೊಂದಲು, ಶಾಲಾ-ಕಾಲೇಜುಗಳಲ್ಲಿ ಪ್ರವೇಶ ಪಡೆಯಲು ಅಗತ್ಯವಿರುವ ಕೆಲವು ಅರ್ಹತೆಗಳು ನಮಗಿರಬೇಕು. ಹೀಗೆ ಮಾನವ ಮಾನವನಾಗಿರಲು ಬೇಕಾಗಿರುವ ಪ್ರೀತಿ, ವಿಶ್ವಾಸ, ಕರುಣೆ, ಶ್ರದ್ಧೆ, ನಂಬಿಕೆ, ಸೇವೆ ಇನ್ನಿತರೆ ಮಾನವೀಯತೆಯ ಗುಣಾಂಶಗಳ ಅರ್ಹತೆ ಹೊಂದಿರಬೇಕಾಗಿರುತ್ತದೆ. ಈ ನಿಟ್ಟಿನಲ್ಲಿ ಮಾನವೀಯ ಮೌಲ್ಯಗಳ ಪರಿಪಾಲನೆಯು ಮಾನವನಿಗಿರಬೇಕಾದ ಅರ್ಹತೆಯಾಗಿದೆ.
>
> **- ಶಿವನಗೌಡ ಗೌಡರ.**
>
> ಮುಖ್ಯೋಪಾಧ್ಯಾಯರು, ಬಸವೇಶ್ವರ ಪ್ರೌಢಶಾಲೆ.

ವೇದಿಕೆಯಲ್ಲಿ ಬಸವ ಯೋಗ ಕೇಂದ್ರದ ಪ್ರಾಚಾರ್ಯ ಕೆ ಎಸ್ ಪಲ್ಲೇದ, ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಹಿರಿಯ ಸದಸ್ಯೆ ಗಿರಿಜಾ ನಾಲತ್ವಾಡಮಠ, ಯೋಗ ಸಾಧಕಿ ಜ್ಯೋತಿ ಜಾನೋಪಂತರ ಮತ್ತು ಯೋಗ ಪಾಠಶಾಲೆಯ ನಿತ್ಯ ಯೋಗ ಸಾಧಕ ವೃಂದದವರು ಉಪಸ್ಥಿತರಿದ್ದರು.

ಪ್ರಾರಂಭದಲ್ಲಿ ವಿಜಯಲಕ್ಷ್ಮೀ ಆನೆಹೊಸೂರ ವಚನ ಪ್ರಾರ್ಥನೆ ಹೇಳಿದರು. ಸುಲೋಚನಾ ಐಹೊಳ್ಳಿ ಸ್ವಾಗತಿಸಿದರು.

ಕೆ ಎಸ್ ಪಲ್ಲೇದ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಡಾ. ಎಂ ವಿ ಐಹೊಳ್ಳಿ ಕಾರ್ಯಕ್ರಮ ನಿರೂಪಿಸಿದರು. ಅರುಣಾ ಇಂಗಳಳ್ಳಿ ವಂದಿಸಿದರು.

ಜೂನ್‌ನಲ್ಲಿ ಮಳೆಗಾಗಿ ಪ್ರಾರ್ಥನೆ-ಇದೀಗ ಸಾಕಪ್ಪಾ ಸಾಕು.....

# ನಿರಂತರ ಸುರಿಯುತ್ತಿರುವ ಮಳೆರಾಯ: ಜನಜೀವನ ಅಸ್ತವ್ಯಸ್ತ





■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಳೆದ 8/10 ದಿನಗಳಿಂದ ಸುರಿಯುತ್ತಿರುವ ಮಳೆಯಿಂದಾಗಿ ಕೃಷಿ, ಶಿಕ್ಷಣ,ಸಾರಿಗೆ,ಆರೋಗ್ಯ, ವ್ಯಾಪಾರ-ವಹಿವಾಟು ಸೇರಿ ಎಲ್ಲ ಕ್ಷೇತ್ರ ಮತ್ತು ಜನ ಜೀವನದ ಮೇಲೆ ವ್ಯತಿರಿಕ್ತ ಪರಿಣಾಮ ಬೀರಿದೆ. ಭಾನುವಾರವಂತೂ ಬೆಳಿಗ್ಗೆಯಿಂದ ಸಂಜೆವರೆಗೂ ಜನ ಹೊರ ಬಾರದಂತೆ ಮಳೆ ಸುರಿದಿದೆ.

**ಚಿಂತೆಗೀಡಾದ ರೈತ ಸಮುದಾಯ:**

ಜೂನ್‌ನಲ್ಲಿ ಮಳೆಗಾಗಿ ರೈತರು ಸೇರಿ ಜನಸಮುದಾಯ ವಿವಿಧ ಸಂಪ್ರದಾಯ,ಪ್ರಾರ್ಥನೆ, ಪೂಜೆಗಳನ್ನು ಮಾಡಿದ್ದರೆ ಈಗ ಒಂದಷ್ಟು ಮಳೆ ಬಿಡುವಿಗಾಗಿ ಹಂಬಲಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ಸತತ ಮಳೆಯಿಂದ ಜಮೀನಿನಲ್ಲಿ ಕಾಲಿಡದಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಮಳೆ ತಡವಾಗಿದ್ದರಿಂದ ಬಿತ್ತಿನೆ ಮಾಡಿ 15/20 ದಿನಗಳ ಕಾಲದ ಸಣ್ಣ ಬೆಳೆಗಳೀಗ ತೇವಾಂಶ ಹೆಚ್ಚಳದಿಂದ ಹಳದಿರೋಗ, ಕೀಟಬಾಧೆಗೆ ತುತ್ತಾಗುತ್ತಿವೆ. ಜಮೀನಿನಲ್ಲಿ ಬೆಳೆಗಿಂತ ಕಳೆ ಹೆಚ್ಚಾಗುತ್ತಿದ್ದು ಎಡೆ ಹೊಡೆಯಲು, ಕಳೆ ತೆಗೆಯಲು ಅವಕಾಶ ಇಲ್ಲದಂತಾಗಿ ರೈತರು ಚಿಂತೆಗೀಡಾಗಿದ್ದಾರೆ. ಮುಂಗಾರಿನ ಪ್ರಮುಖ ವಾಣಿಜ್ಯ ಬೆಳೆ ಹೆಸರು ಬಿತ್ತನೆಯೇ ಆಗಿಲ್ಲ. ಶೇ.70ರಷ್ಟು ರೈತರು ಗೋವಿನ ಜೋಳ ಬಿತ್ತನೆ ಮಾಡಿದ್ದು ಅದಕ್ಕೆ ಲದ್ದಿಹುಳು ಬಾಧೆ ಮತ್ತು ತೇವಾಂಶ ಹೆಚ್ಚಳದಿಂದ ಹಾಳಾಗುತ್ತಿವೆ. ಇನ್ನೂ ಒಂದು ವಾರ ಮಳೆ ಬಿಡುವ ಲಕ್ಷಣಗಳೇ ಇಲ್ಲ ಮಾತುಗಳು ಕೇಳಿ ಬರುತ್ತಿವೆ. ರೈತರ ಮುಂಗಾರಿನ ಬೆಳೆಗಳ ನಿರೀಕ್ಷೆ ಹುಸಿಯಾಗುವ ಸಾಧ್ಯತೆ ತಳ್ಳಿಹಾಕುವಂತಿಲ್ಲ. ಅದಕ್ಕಾಗಿ ರೈತರು ಒಲ್ಲದ ಮನಸ್ಸಿನಿಂದಲೇ ಮಳೆರಾಯನ ಬಿಡುವಿಗಾಗಿ ಬೇಡುವಂತಾಗಿದೆ ಎನ್ನುತ್ತಾರೆ ರೈತ ಪ್ರಕಾಶ ಹುಲಕೋಟಿ.

**ಸೋರುತ್ತಿವೆ ಮನೆಗಳು:**

ನಿರಂತರ ಮಳೆಯಿಂದ ಮಣ್ಣಿನ ಮತ್ತು ಹಳೆಯದಾದ ಕಾಂಕ್ರಿಟ್ ಮನೆ, ಶಾಲೆ, ದೇವಸ್ಥಾನ, ಸರ್ಕಾರಿ ಕಚೇರಿಗಳೂ ಸೂರುತ್ತಿವೆ. ತಟತಟ ಸೂರುವ ಮನೆಗಳಲ್ಲಿ ವಿದ್ಯುತ್ ಸಂಪರ್ಕ ಕಡಿತ ಮಾಡಿದ್ದರಿಂದ ಬೆಳಕಿಲ್ಲದ ಸೋರುವ ಮನೆಯಲ್ಲಿಯೇ ಜೀವನ ನಡೆಸುವ ಪರಿಸ್ಥಿತಿ ನಿರ್ಮಾಣವಾಗಿದೆ. ರಕ್ಷಣೆಗಾಗಿ ಸಾವಿರಾರು ಖರ್ಚು ಮಾಡಿ ಪ್ಲಾಸ್ಟಿಕ್, ತಾಡಪತ್ರಿ ಖರೀದಿಸಿ ಮನೆಯ ಮೇಲೆ ಹೊದಿಸಿದ್ದರೂ ಸೂರುವುದು ತಪ್ಪುತ್ತಿಲ್ಲ ಮತ್ತು ಮಳೆಯೂ ನಿಲ್ಲುತ್ತಿಲ್ಲವಾದ್ದರಿಂದ ಜನತೆ ಪಡಬಾರದ ಯಾತನೆ ಅನುಭವಸುತ್ತಿದ್ದಾರೆ. ರೈತರಿಗೆ ಜಾನುವಾರುಗಳ ಪೋಷಣೆ ಕಷ್ಟವಾಗಿದೆ. ಪಟ್ಟಣ ಸೇರಿ ತಾಲೂಕಿನಾದ್ಯಂತ ಮನೆಗಳು ಸೂರುತ್ತಿದ್ದು ಹತ್ತಾರು ಮನೆಗಳು ಬಿದ್ದಿವೆ.

**ಬಟ್ಟೆಗಳು ಒಣಗುತ್ತಿಲ್ಲ:**

8/10 ದಿನದಿಂದ ಬರೀ ಮೂಡಕವಿದ ವಾತಾವರಣ ಬಿಸಿಲೇ ಇಲ್ಲದ ಕಾರಣ ತೊಳೆದ ಬಟ್ಟೆಗಳು ಒಣಗುತ್ತಿಲ್ಲ. ಶಾಲೆಗೆ ಹೋಗುವ ಮಕ್ಕಳು ಯೂನಿಫಾರ್ಮ್‌ಗಳನ್ನು ಒಣಗಿಸಲು ತಾಯಂದಿರು ಪರದಾಡುತ್ತಿದ್ದಾರೆ. ಮನೆಯ ಒಳಗಡೆಯೇ ಹಗ್ಗ ಕಟ್ಟಿ ಒಣಹಾಕಿರುವ ಬಟ್ಟೆಗಳು ನಾಲ್ಕೈದು ದಿನ ಕಳೆದರೂ ಒಣಗುತ್ತಿಲ್ಲ. ಹೊರ ಹೋಗಲು ಮಳೆ ಬಿಡುವು ನೀಡದ್ದರಿಂದ ಜರ್ಕಿನ್, ಸ್ವೆಟರ್, ಛತ್ರಿ,ಕ್ಯಾಪ್ ಬಳಕೆ ಸಾಮಾನ್ಯವಾಗಿದೆ ಮತ್ತು ಚಳಿಗಾಲದ ವಾತಾವರಣ ನಿರ್ಮಾಣವಾಗಿದೆ. ರಸ್ತೆಗಳ ಸ್ಥಿತಿ ಸಂಪೂರ್ಣ ಹದಗೆಟ್ಟಿದ್ದು ಜನರು ಹೊರ ಬರಲೂ ಬೇಸರ ವ್ಯಕ್ತಪಡಿಸುತ್ತಿದ್ದಾರೆ.

# ಎಂ ಜಿ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಕಲಿಕಾ ಸಾಮಗ್ರಿ ವಿತರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಸೊರಟೂರಿನ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ಇತ್ತೀಚೆಗೆ ಎಂ ಜಿ ಚಾರಿಟೇಬಲ್ ಟ್ರಸ್ಟ್ ವತಿಯಿಂದ 8ನೇ ತರಗತಿಯ ವಿದ್ಯಾರ್ಥಿಗಳಿಗೆ ಕಲಿಕಾ ಸಾಮಗ್ರಿಗಳನ್ನು ವಿತರಿಸಲಾಯಿತು. ಎಸ್ ಬಿ ಗೌಡನಾಯ್ಕರ ಅಧ್ಯಕ್ಷತೆ ವಹಿಸಿ ಮಾತನಾಡಿ, ವಿದ್ಯಾರ್ಥಿಗಳು ಸಮಾಜದ ಸಂಪತ್ತಾಗಿದ್ದಾರೆ. ನಿಗದಿತ ಸಮಯದಲ್ಲಿ ನಿಗದಿತ ಗುರಿಗಳನ್ನು ಸಾಧಿಸುತ್ತ ಸಾಗಬೇಕು ಎಂದರು.

ಟ್ರಸ್ಟ್‌ನ ಕಾರ್ಯದರ್ಶಿ ಮೌಲಾನ ಅಬ್ದುಲ್ ಗಫೂರ್ ಪಲ್ಲೇದ ಮಾತನಾಡಿ, ವಿದ್ಯಾರ್ಥಿಗಳು ಶಾಲೆಯ ನಿಯಮಗಳನ್ನು ಪಾಲಿಸುತ್ತ ಸಾಗಿದಲ್ಲಿ ಖಂಡಿತವಾಗಿಯೂ ಅತ್ಯುತ್ತಮ ಭವಿಷ್ಯವನ್ನು ರೂಪಿಸಿಕೊಳ್ಳಬಹುದು. ನಾವು ಕೊಡುತ್ತಿರುವ ಪೆನ್ನು, ನೋಟ್ ಪುಸ್ತಕಗಳು ಯಾವುದೇ ರೀತಿಯ ದಾನ-ಧರ್ಮ ಎಂದು ತಿಳಿಯದೆ, ನಿಮಗಾಗಿ ಪ್ರೀತಿಯಿಂದ ಕೊಡುತ್ತಿರುವ ಕಾಣಿಕೆ ಎಂದು ಭಾವಿಸಿ ಅಧ್ಯಯನ ನಿರತರಾಗಿ ತಂದೆ-ತಾಯಿಗಳಿಗೆ, ಶಾಲೆಗೆ, ಸಮಾಜಕ್ಕೆ ಒಳ್ಳೆಯ ಹೆಸರನ್ನು ತರಬೇಕು ಎಂದು ಕಿವಿಮಾತು ಹೇಳಿದರು.

ಶಿಕ್ಷಕ ಎಂ ಎ ಯರಗುಡಿ ಮಾತನಾಡಿ, ಎಂ ಜಿ ಚಾರಿಟೇಬಲ್ ಟ್ರಸ್ಟ್ ಅಬುಹುರೇರಾ ಮಸ್ಜಿದ ಗಂಗಿಮಡಿಯವರು ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡುತ್ತಿರುವದರ ಜೊತೆಗೆ, ಶಾಲೆಗಳಲ್ಲಿ ಕಲಿಯುವ ಮಕ್ಕಳಿಗೆ ನೋಟ್ ಪುಸ್ತಕ ಮತ್ತು ಬ್ಯಾಗ್‌ಗಳನ್ನು ಕೊಡುತ್ತಿರುವುದು ಅಭಿನಂದನಾರ್ಹ ಎಂದರು.

ವೇದಿಕೆಯ ಮೇಲೆ ಟ್ರಸ್ಟ್‌ನ ಅಧ್ಯಕ್ಷರಾದ ಮಕ್ತುಮಸಾಬ ನಾಯಕ, ಮಹಮ್ಮದಸಾಬ ಬೊಡ್ಲೇಖಾನ, ಚಾಂದಸಾಬ ಅಬ್ಬಿಗೇರಿ, ಅಹಮ್ಮದ್ ಕಲೆಗಾರ, ಮೋದಿನಸಾಬ ಕನಕವಾಡ, ದಾವೂದ ಕುರಹಟ್ಟಿ, ಸಿರಾಜ್ ಯಳವತ್ತಿ, ಶಿಕ್ಷಕರಾದ ಬಸಪ್ಪ ನೆರ್ತಿ ಹಾಜರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka